ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 40 RNI Number : KNKAN/25/A2770 13-02-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :40 ರಾಯಚೂರು 13-02-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

‘ಭಾರತ್ ಬಂದ್’ಗೆ ಕಾರ್ಮಿಕ ಸಂಘಟನೆಗಳ ಕರೆ; ಹಲವು ರಾಜ್ಯಗಳಲ್ಲಿ ಉತ್ತಮ ಪ್ರತಿಕ್ರಿಯೆ

ನವದೆಹಲಿ,ಫೆ.12-

ಕೇಂದ್ರ ಸರ್ಕಾರದ ಕಾರ್ಮಿಕ, ರೈತ ಮತ್ತು 'ಕಾರ್ಪೊರೇಟ್ ಪರ' ನೀತಿಗಳನ್ನು ವಿರೋಧಿಸಿ ಕೇಂದ್ರ ಕಾರ್ಮಿಕ ಸಂಘಗಳ ಜಂಟಿ ವೇದಿಕೆಗೆ ಸೇರಿದ ನೌಕರರು ಮತ್ತು ಕಾರ್ಮಿಕರು ಇಂದು ದೇಶಾದ್ಯಂತ ಮುಷ್ಕರಕ್ಕೆ ಕರೆ ನೀಡಿದ್ದಾರೆ. ಇದರಿಂದಾಗಿ ಹಲವು ರಾಜ್ಯಗಳಲ್ಲಿ ಸಾಮಾನ್ಯ ಜನಜೀವನ ಅಸ್ತವ್ಯಸ್ತವಾಗಿದೆ.

ಹೊಸ ಕಾರ್ಮಿಕ ಸಂಹಿತೆಗಳನ್ನು ವಿರೋಧಿಸಿ ಸಾರ್ವತ್ರಿಕ ಮುಷ್ಕರಕ್ಕೆ ಕರೆ ನೀಡಲಾಗಿದ್ದು, ಇದಕ್ಕಾಗಿ 30 ಕೋಟಿ ಕಾರ್ಮಿಕರನ್ನು ಸಜ್ಜುಗೊಳಿಸಲಾಗಿದೆ ಎಂದು ಕಾರ್ಮಿಕ ಸಂಘಗಳ ಜಂಟಿ ವೇದಿಕೆ ಈಗಾಗಲೇ ತಿಳಿಸಿದೆ.

ಈ ಕುರಿತು ಮಾತನಾಡಿರುವ ಅಖಿಲ ಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಮರ್‌ಜೀತ್ ಕೌರ ದೇಶಾದ್ಯಂತ ಸಾರ್ವತ್ರಿಕ ಮುಷ್ಕರ ಕರೆ ನೀಡಲಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಹೇಳಿದರು.

ಅಸ್ಸಾಂ, ತಮಿಳುನಾಡು, ಪಾಂಡಿಚೇರಿ, ಕೇರಳ, ಒಡಿಶಾ ಮತ್ತು ಬಿಹಾರ ಸೇರಿದಂತೆ ಹಲವು ರಾಜ್ಯಗಳಲ್ಲಿ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ.



ಅಂಗಡಿ-ಮುಂಗಟ್ಟುಗಳು ಬಂದ್ ಆಗಿದ್ದವು. ಸಂಚಾರ ವ್ಯವಸ್ಥೆ ಮೇಲೆ ಬಂದ್ ಪರಿಣಾಮ ಬೀರಿದೆ.

ಬೇಡಿಕೆಗಳೇನು?: ನಾಲ್ಕು ಕಾರ್ಮಿಕ ಸಂಹಿತೆಗಳು ಮತ್ತು ನಿಯಮಗಳನ್ನು ರದ್ದುಪಡಿಸುವುದು. ಬೀಜ ಕರಡು ಮಸೂದೆ ಮತ್ತು ವಿದ್ಯುತ್ ತಿದ್ದುಪಡಿ ಮಸೂದೆಗಳನ್ನು ಹಿಂತೆಗೆದುಕೊಳ್ಳುವುದು. ಖಾಸಗೀಕರಣ ಮತ್ತು ಕಾರ್ಪೊರೇಟ್‌ಸ್ನೇಹಿ ಸುಧಾರಣೆಗಳಿಗೆ ವಿರೋಧ ಮನರೇಗಾ ರದ್ದು ವಾಪಸ್ ಪಡೆಯಬೇಕು.

ಭಾರತೀಯ ಕಾರ್ಮಿಕ ಸಂಘಗಳ ಒಕ್ಕೂಟ (ಸಿಐಟಿಯು), ಅಖಿಲ ಭಾರತ ಕಾರ್ಮಿಕ ಸಂಘಗಳ ಕಾಂಗ್ರೆಸ್ (ಎಐಟಿಯುಸಿ), ಭಾರತೀಯ ರಾಷ್ಟ್ರೀಯ ಕಾರ್ಮಿಕ ಸಂಘಗಳ ಕಾಂಗ್ರೆಸ್ (ಐಎನ್‌ಟಿಯುಸಿ), ಹಿಂದ್ ಮಜ್ದೂರ್ ಸಭಾ (ಎಚ್‌ಎಂಎಸ್) ಮತ್ತು ಇತರ ಹಲವಾರು ಪ್ರಮುಖ ಕಾರ್ಮಿಕ ಸಂಘಗಳು ಜಂಟಿಯಾಗಿ ಬಂದ್‌ಗೆ ಕರೆ ಕೊಟ್ಟಿವೆ.

ನವದೆಹಲಿ ವರದಿ: ಬಂದ್ ಹಿನ್ನೆಲೆಯಲ್ಲಿ ನವದೆಹಲಿಯ ಕೈಗಾರಿಕಾ ಪ್ರದೇಶಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯಿತು. ಪರಿಣಾಮವಾಗಿ, ರಸ್ತೆಗಳಲ್ಲಿ ಸಂಚಾರ ಕಡಿಮೆಯಾಗಿತ್ತು. ಬ್ಯಾಂಕಿಂಗ್, ವಿಮೆ, ಅಂಚೆ, ಸಾರಿಗೆ, ಆರೋಗ್ಯ, ಕಲ್ಲಿದ್ದಲು ಮತ್ತು ಕಲ್ಲಿದ್ದಲೇತರ ಗಣಿಗಳು, ಅನಿಲ ಪೈಪ್‌ಲೈನ್ ಸೇರಿದಂತೆ ಹಲವು ಕ್ಷೇತ್ರಗಳ ಮೇಲೆ ಬಂದ್ ಪರಿಣಾಮ ಬೀರಿದೆ ಎಂದು ವರದಿಯಾಗಿದೆ.

ತಮಿಳುನಾಡು, ಕೇರಳ ವರದಿ: ಬಂದ್ ಪರಿಣಾಮವಾಗಿ ತಮಿಳುನಾಡು, ಕೇರಳದಲ್ಲಿ ಬಸ್ ಸಂಚಾರ ವ್ಯತ್ಯಯವಾಗಿದೆ. ಡಿಎಂಕೆ ಸರ್ಕಾರ ಬಂದ್ ಬೆಂಬಲಿಸಿದೆ. ಒಡಿಶಾದ ಭುವನೇಶ್ವದಲ್ಲಿಯೂ ಬಂದ್ ಬೆಂಬಲಿಸಿ, ಕಾರ್ಮಿಕ ಸಂಘಟನೆಗಳು ಪ್ರತಿಭಟನೆ ನಡೆಸಿದವು.

ಗೋವಾ ವರದಿ: ಗೋವಾದಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬ್ಯಾಂಕಿಂಗ್ ಕಾರ್ಯಾಚರಣೆಗಳ ಮೇಲೆ ಬಂದ್ ಪರಿಣಾಮ ಬೀರಿದೆ. ಇತರೆ ಅಗತ್ಯ ಸೇವೆಗಳ ಮೇಲೆ ಹೆಚ್ಚು ಪರಿಣಾಮವಾಗಿಲ್ಲ. ಮುಷ್ಕರ ಬೆಂಬಲಿಸಿ ಕಾರ್ಮಿಕ ಸಂಘಗಳು ವಿವಿಧ ಕೈಗಾರಿಕಾ ಎಸ್ಟೇಟ್‌ಗಳಲ್ಲಿ ಕೆಲಸ ಸ್ಥಗಿತಗೊಳಿಸಿವೆ.

ಪಶ್ಚಿಮ ಬಂಗಾಳ ವರದಿ: ಪಶ್ಚಿಮ ಬಂಗಾಳದಲ್ಲಿ ಬಂದ್ ಜನಜೀವನದ ಮೇಲೆ ಹೆಚ್ಚು ಪರಿಣಾಮ ಬೀರಿಲ್ಲ. ಕೇಂದ್ರ ಮತ್ತು ರಾಜ್ಯ ನಾಗರಿಕ ಸೇವೆಗಳ ನೌಕರರು ಮತ್ತು ಶಿಕ್ಷಕರು, ಕೇಂದ್ರ ಮತ್ತು ರಾಜ್ಯ ಸಾರ್ವಜನಿಕ ವಲಯದ ಸಂಸ್ಥೆಗಳ ಕಾರ್ಮಿಕರ ಗುಂಪುಗಳು ಮತ್ತು ಸ್ವತಂತ್ರ ಕಾರ್ಮಿಕ ಸಂಘಗಳು ಬಂದ್ ಕರೆಗೆ ಬೆಂಬಲ ನೀಡಿವೆಯಾದರೂ, ಜನ ಜೀವನಕ್ಕೆ ತೊಂದರೆಯಾಗಿಲ್ಲ. ವಾಹನ ಸಂಚಾರವೂ ಎಂದಿನಂತಿತ್ತು.

ಮಧ್ಯ ಪ್ರದೇಶ ವರದಿ: ಮಧ್ಯ ಪ್ರದೇಶದಲ್ಲಿ ರಕ್ಷಣಾ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ 25,000ಕ್ಕೂ ಹೆಚ್ಚು ನೌಕರರು ಒಂದು ಗಂಟೆ ತಡವಾಗಿ ಕೆಲಸಕ್ಕೆ ಹಾಜರಾದರು ಎಂದು ಅಖಿಲ ಭಾರತ ರಕ್ಷಣಾ ನೌಕರರ ಒಕ್ಕೂಟ ತಿಳಿಸಿದೆ.

ಬೇಸಿಗೆಯಲ್ಲಿ ಎಲ್ಲಾ ಕಡೆಗಳಲ್ಲೂ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆಯಾಗಲಿ: ನಿತೀಶ್

ರಾಯಚೂರು ಫೆ.12

ಬೇಸಿಗೆ ಆಗಮನದ ಹಿನ್ನೆಲೆಯಲ್ಲಿ ಈಗಾಗಲೇ ಬಿಸಿಲು ಏರಲಾರಂಭಿಸಿದೆ. ಆದ್ದರಿಂದ ರಾಯಚೂರು ಜಿಲ್ಲೆಯಲ್ಲಿ ಮುಂಬರುವ ಬೇಸಿಗೆಯ ಸಮಯದಲ್ಲಿ ಸಮರ್ಪಕವಾದ ಕುಡಿಯುವ ನೀರಿನ ವ್ಯವಸ್ಥೆಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನೂತನ ಜಿಲ್ಲಾಡಳಿತ ಭವನದಲ್ಲಿ ಕೇಸ್ವಾನ್ ಹಾಲನಲ್ಲಿ ಫೆ.12ರ ಸಂಜೆ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಅವರು ಮಾತನಾಡಿದರು.

ಈ ಭಾಗಕ್ಕೆ ನೀರು ಪೂರೈಸುವ ತುಂಗಭದ್ರಾ ಡ್ಯಾಮನ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾಮಗಾರಿ ಹಿನ್ನೆಲೆಯಲ್ಲಿ ತುಂಗಾ ಕಾಲುವೆ ನೀರು ಅವಲಂಭಿಸಿರುವ ಸಿಂಧನೂರು, ಮಾನ್ವಿ, ಮಸ್ಕಿ, ಸಿರವಾರ ಮತ್ತು ರಾಯಚೂರು ತಾಲೂಕುಗಳಲ್ಲಿ ನೀರಿನ ಲಭ್ಯತೆ ಪರಿಸ್ಥಿತಿಯ ಬಗ್ಗೆ ಈಗಿನಿಂದಲೇ ಗಮನ ಹರಿಸಬೇಕು. ಈ ಭಾಗದ ಕೆರೆಗಳಲ್ಲಿ ಈಗಿರುವ ನೀರಿನ ಪ್ರಮಾಣ ಎಷ್ಟು? ಕೆರೆಗಳನ್ನು ಇನ್ಮುಂದೆ ಯಾವ ವೇಳೆಗೆ ತುಂಬಿಸಬೇಕು? ಎನ್ನುವಂತಹ ಅಂಶಗಳ ಬಗ್ಗೆ ಆಯಾ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್



ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪುರಸಭೆ, ನಗರಸಭೆ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲೆಯ ಆಯಾ ತಾಲೂಕಿನಲ್ಲಿನ ಕೆರೆಗಳಲ್ಲಿನ ನೀರಿನ ವ್ಯವಸ್ಥೆಯ ಬಗ್ಗೆ ಜಿಲ್ಲಾಧಿಕಾರಿಗಳು ಆಯಾ ತಹಸೀಲ್ದಾರಗಳಿಂದ ಸಮಗ್ರ ಮಾಹಿತಿ ಪಡೆದುಕೊಂಡರು.

ಸಿಂಧನೂರ ತಾಲೂಕಿನಲ್ಲಿ ಒಟ್ಟು 155 ಕೆರೆಗಳಿದ್ದು, ಈ ಪೈಕಿ 151 ಕೆರೆಗಳು ಸಹ ಭಾಗಶಃ ತುಂಬಿವೆ. ಮಾರ್ಚ ಕೊನೆಯ ವಾರದಲ್ಲಿ ನಮಗೆ ನೀರಿನ ಅವಶ್ಯಕತೆ ಬರುತ್ತದೆ ಎಂದು ಸಿಂಧನೂರ ತಹಸೀಲ್ದಾರು ಸಭೆಗೆ ಮಾಹಿತಿ ನೀಡಿದರು.

ಮಾನವಿ ತಾಲೂಕಿನಲ್ಲಿ ಒಟ್ಟು 18 ಕೆರೆಗಳಿದ್ದು ಎಲ್ಲ ಕೆರೆಗಳು ಭಾಗಶಃ ತುಂಬಿದ್ದು ಇನ್ನು 45 ದಿನಗಳವರೆಗೆ ನಮಗೆ ನೀರಿನ ಸಮಸ್ಯೆಯಾಗುವುದಿಲ್ಲ ಎಂದು ಮಾನ್ವಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಿರವಾರ ತಾಲೂಕಿನಲ್ಲಿ ಒಟ್ಟು 43 ಕೆರೆಗಳಿವೆ. ಈ ಪೈಕಿ 4 ಕೆರೆಗಳು ಪೂರ್ಣ ತುಂಬಿವೆ. ಇನ್ನು 39 ಕೆರೆಗಳು ಭಾಗಶಃ ತುಂಬಿವೆ. ಅತ್ತನೂರ ಮತ್ತು ಕಲ್ಲೂರ ಪಂಚಾಯಿತಿಯ ವ್ಯಾಪ್ತಿಯ ಕೆರೆಗಳಿಗೆ ನೀರಿನ ಕೊರತೆ ಇದೆ ಎಂದು ಸಿರವಾರ ತಾಲೂಕು ಅಧಿಕಾರಿಗಳು ಮಾಹಿತಿ ನೀಡಿದರು. ಮಸ್ಕಿ ತಾಲೂಕಿನಲ್ಲಿ ಒಟ್ಟು 21 ಕೆರೆಗಳಿದ್ದು, ಈ ಪೈಕಿ 16 ಕೆರೆಗಳಲ್ಲಿ ನೀರು ಇದೆ. ಇನ್ನುಳಿದ ಕೆರೆಗಳಿಗೆ ನೀರಿನ

3ನೇ ಪುಟಕ್ಕೆ

ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದ ಪ್ರಾದೇಶಿಕ ಆಯುಕ್ತರು



ರಾಯಚೂರು,ಫೆ.12

ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದರು.

ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಈಗಿನ ಮಹಾನಗರ ಪಾಲಿಕೆಯ ಕಚೇರಿಯ ಕೋರ್ಟ ಹಾಲನಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಆಯುಕ್ತರು, ರಾಯಚೂರು ಸಿಟಿ ಜನತೆಗೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಸೇರಿದಂತೆ ಯಾವುದೇ ರೀತಿಯ ಮೂಲಭೂತ ಸೌಕರ್ಯ ಕಾರ್ಯವು ಇನ್ಮುಂದೆ ಸಹ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯಿಂದ ಸಿಟಿಯಲ್ಲಿ ಈಗ ನಡೆಯುತ್ತಿರುವ ಸ್ವಚ್ಛತಾ ಕಾರ್ಯಗಳು ಮತ್ತು ನಗರ ಸೌಂದರ್ಯೀಕರಣ ಕಾರ್ಯಗಳನ್ನು ಯಥಾವತ್ತು ಮುಂದುವರೆಸಬೇಕು. ಸುಗಮ ಸಂಚಾರಕ್ಕೆ ತೊಂದರೆಯಾಗದ ರೀತಿಯಲ್ಲಿ ಸಿಟಿಯಲ್ಲಿನ ಎಲ್ಲ ಕಡೆಗೆ ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಡುವ

3ನೇ ಪುಟಕ್ಕೆ

ಸಂತಕವಿ ಸರ್ವಜ್ಞ ಜಯಂತಿ ಅರ್ಥಪೂರ್ಣ ಆಚರಣೆಗೆ ಸೂಚನೆ

ರಾಯಚೂರು ಫೆ.11

ತ್ರಿಪದಿ ಕವಿ ಎಂದೇ ಪ್ರಸಿದ್ದಿಯಾದ ಸಂತ ಕವಿ ಸರ್ವಜ್ಞ ಅವರ ಜಯಂತಿಯನ್ನು ಜಿಲ್ಲಾಡಳಿದಿಂದ ಫೆ.20ರಂದು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು



ಎಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ ಅವರು ಹೇಳಿದರು.

ಫೆ.11ರ ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಂತ ಕವಿ ಸರ್ವಜ್ಞ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಎಲ್ಲ ಸರ್ಕಾರಿ ಕಚೇರಿಗಳು, ಗ್ರಾಮ ಪಂಚಾಯಿತಿಗಳಲ್ಲಿ, ಶಾಲಾ-ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ ಸಂತ ಕವಿ ಸರ್ವಜ್ಞ ಜಯಂತಿಯನ್ನು ಕಡ್ಡಾಯವಾಗಿ ಆಚರಣೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸಂಬಧಿಸಿದ ಅಧಿಕಾರಿಗಳು ನಾನಾ ಕಾರ್ಯಸಿದ್ಧತೆಗೆ ಅಗತ್ಯ ಕ್ರಮ ವಹಿಸಬೇಕು. ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂದು ಜಿಲ್ಲಾ ಕೇಂದ್ರದಲ್ಲಿ ಬೆಳಿಗ್ಗೆ 09 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮೆರವಣಿಗೆ ಸಾಗುವ ಮಾರ್ಗ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆಯನ್ನು ಮಹಾನಗರ ಪಾಲಿಕೆಯಿಂದ ಕಲ್ಪಿಸಬೇಕು ಎಂದರು.

ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು-ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ

3ನೇ ಪುಟಕ್ಕೆ

ಬಾಲಕಾರ್ಮಿಕತೆ ಹಾಗೂ ಬಾಲ್ಯ ವಿವಾಹ ತಡೆಗಟ್ಟಲು ಸರ್ಕಾರಿ ತರ ಸಂಸ್ಥೆಗಳ ಪಾತ್ರ ಬಹಳ ಮುಖ್ಯ: ಎಸ್‌ಪಿ

ರಾಯಚೂರು,ಫೆ.12- ಜಿಲ್ಲೆಯಲ್ಲಿ ನಿರಂತರವಾಗಿ ಬಾಲ್ಯವಿವಾಹಗಳು ಹೆಚ್ಚುತ್ತಿದ್ದು, ಪೊಲೀಸ್ ಇಲಾಖೆ ಹಾಗೂ ಇತರೇ ಇಲಾಖೆಯ ಜೊತೆಗೆ ಕೈ ಸಂಸ್ಥೆತರ ಸಹಕಾರ ಇದ್ದಾಗ ಮಾತ್ರ ಬಾಲ್ಯವಿವಾಹ ಬಾಲಕಾರ್ಮಿಕ ತಡೆಗಟ್ಟಲು ಸಾಧ್ಯ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶುಗಿರಿ ಹೇಳಿದರು.



ಅವರಿಂದು ನಗರದ ಅತಿಥಿ ಖಾಸಗಿ ಹೊಟೆಲ್‌ವೊಂದರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಕಾರ್ಮಿಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಚೈಲ್ಡ್ ರೈಟ್ಸ್ ಅಂಡ್ ಯೂ ಕ್ರೈ ಸಂಸ್ಥೆ ಬೆಂಗಳೂರು ಹಮ್ಮಿಕೊಂಡಿದ್ದ, ಬಾಲ್ಯ ವಿವಾಹ, ಹಾಗೂ ಬಾಲಕಾರ್ಮಿಕತೆ ತಡೆಗಟ್ಟುವ ಕುರಿತು ಜಿಲ್ಲಾ ಮಟ್ಟದ ಸಮಾಲೋಚನಾ ಸಭೆಯನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ನಮ್ಮ ರಾಯಚೂರು ಜಿಲ್ಲೆಯಲ್ಲಿ 2023 ರಲ್ಲಿ 75 ಫೋಕ್ಸೋ ಪ್ರಕರಣಗಳು ದಾಖಲಾಗಿದ್ದು, 2024 ರಲ್ಲಿ 96, 2025 ರಲ್ಲಿ 82 ಪ್ರಕರಣಗಳು ದಾಖಲಾಗಿವೆ. ಜಿಲ್ಲೆಯಲ್ಲಿ ಫೋಕ್ಸೋ ಪ್ರಕರಣಗಳು ನಿರಂತರವಾಗಿ ಹೆಚ್ಚಳವಾಗುತ್ತಿವೆ.

ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹ ಹಾಗೂ ಬಾಲಕಾರ್ಮಿಕತೆಯ ಕುರಿತು ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದ್ದು, ವಿವಿಧ ಇಲಾಖೆಯ ಅಧಿಕಾರಿಗಳು, ಕ್ರೈ ಸಂಸ್ಥೆಯ ಸದಸ್ಯರು ಇದಕ್ಕೆ ಕೈ ಜೋಡಿಸಬೇಕು ಎಂದರು.

ಗ್ರಾಮೀಣ ಭಾಗದಲ್ಲಿ 16-17ನೇ ವಯಸ್ಸಿ ಗೆ ಹೆಣ್ಣುಮಕ್ಕಳ ಮದುವೆ ಮಾಡಲು ಮುಂದಾಗುತ್ತಾರೆ. ಆಯಾ ಹೆಣ್ಣುಮಕ್ಕಳು ಓದುತ್ತಿದ್ದ ಶಾಲೆಯ ಗುರುಗಳು ವಿದ್ಯಾರ್ಥಿನಿ ಶಾಲೆಗೆ ಹಲವು ದಿನಗಳ ವರೆಗೆ ಗೈರಾಗಿರುವುದು ಕಂಡುಬಂದರೆ ಮನೆಗೆ ಆಯಾ ಗ್ರಾಮದ ವ್ಯಾಪ್ತಿಯ ಮಕ್ಕಳ ರಕ್ಷಣಾಧಿಕಾರಿ ಅಥವಾ ಪೊಲೀಸರೊಂದಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಬೇಕು ಎಂದರು.

ದೇವದಾಸಿ ಪದ್ದತಿಯೂ ಫೋಕ್ಸೋ

3ನೇ ಪುಟಕ್ಕೆ

ರಾಯಚೂರು ಗ್ರಾಮೀಣ ಕ್ಷೇತ್ರದ ಟಾಸ್ಕ್‌ಫೋರ್ಸ್ ಸಭೆ


ಬೇಸಿಗೆ ನಿರ್ವಹಣೆಗೆ ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ:ಬಸನಗೌಡ ದದ್ದಲ್ ಸೂಚನೆ

ರಾಯಚೂರು ಫೆ.12-

ಬೇಸಿಗೆಯ ಅವಧಿಯಲ್ಲಿ ರಾಯಚೂರು ಗ್ರಾಮೀಣ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಸರಿಯಾದ ರೀತಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ವ್ಯವಸ್ಥೆಯಾಗುವುದು ಸೇರಿದಂತೆ ಫೆಬ್ರವರಿ, ಮಾರ್ಚ, ಏಪ್ರೀಲ್, ಮೇ ಹಾಗೂ ಜೂನ್ ಅವಧಿವರೆಗೆ ಬೇಸಿಗೆ ನಿರ್ವಹಣೆಗೆ ಕ್ರಿಯಾಯೋಜನೆ ಸಿದ್ದಪಡಿಸ ಬೇಕು ಎಂದು ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.12ರಂದು ನಡೆದ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆಯ ಅವಧಿಯಲ್ಲಿ ತುರ್ತು ಸಂದರ್ಭದಲ್ಲಿ ನೀರು ಪೂರೈಕೆಗೆ ಅನುಕೂಲವಾಗುವಂತೆ ಅಗತ್ಯ ಏರ್ಪಾಡನ್ನು ಈಗಿನಿಂದಲೇ ಮಾಡಿಕೊಳ್ಳಬೇಕು. ಮುಖ್ಯ ಜಲಸಂಗ್ರಹಗಾರಗಳಾದ ಕೆರೆಗಳಲ್ಲಿ ಲಭ್ಯವಿರುವ ಗರಿಷ್ಟ ಮತ್ತು ಕನಿಷ್ಟ ನೀರಿನ ಸಾರ್ಥ್ಯದ ಬಗ್ಗೆ ಗಮನ ಹರಿಸಬೇಕು ಎಂದು ಶಾಸಕರು



ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಬಹುದಾದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು? ಗ್ರಾಮಗಳ ಸಂಖ್ಯೆ ಎಷ್ಟು? ಯಾವ ಯಾವ ಕಡೆಗಳಲ್ಲಿ ನೀರಿನ ಸಮಸ್ಯೆಯಾಗಬಹುದು? ನೀರು ಸರಬರಾಜು ಮೂಲಗಳಾದ ನದಿ ಹಳ್ಳ ಬೋರವೆಲ್‌ಗಳ ಸಂಖ್ಯೆ ಎಷ್ಟು? ಬೇಕಾಗುವ ಅನುದಾನ ಎಷ್ಟು? ಇದುವರೆಗೆ ಬಾಡಿಗೆ ಪಡೆದಿರುವ ಖಾಸಗಿ ಬೋರವೆಲ್‌ಗಳ ಸಂಖ್ಯೆ? ಖಾಸಗಿ ಬೋರವೆಲ್ ಮೂಲಕ ನೀರು ಸರಬರಾಜು ಮಾಡಿದ ಗ್ರಾಮಗಳ ಸಂಖ್ಯೆ? ಈ ರೀತಿಯ ನಾನಾ ಅಂಶಗಳ ಬಗ್ಗೆ ಕೂಡಲೇ ಅಧಿಕಾರಿಗಳು ಕಾಳಜಿಯಿಂದ ಕ್ರಿಯಾಯೋಜನೆ ಸಿದ್ಧಪಡಿಸಿ ಕಾರ್ಯನುಷ್ಠಾನ ಮಾಡಬೇಕು ಎಂದು ಶಾಸಕರು ಸೂಚನೆ ನೀಡಿದರು.

ಬೇಸಿಗೆಯ ಅವಧಿಯಲ್ಲಿ ಯಾವುದೇ ಕಡೆಗಳಲ್ಲಿ ಬೋರವೆಲ್‌ಗಳಿಂದ ನೀರು ಸ್ಥಗಿತವಾಗಿ ಕೊರತೆಯಾದಲ್ಲಿ ಅಂತಹ ಕಡೆಗೆ ಖಾಸಗಿ ಬೋರವೆಲ್‌ಗಳು ಎಲ್ಲೆಲ್ಲಿ ಇವೆ ಎಂಬುದರ ಬಗ್ಗೆ ಮುಂಚಿತವಾಗಿಯೇ ಪಟ್ಟಿಮಾಡಿ ನ್ಯಾಯ ವ್ಯವಸ್ಥೆಗೆ ಈಗಿನಿಂದಲೇ ಯೋಜನೆ ರೂಪಿಸಬೇಕು ಎಂದು ಶಾಸಕರು ಎಲ್ಲ ಪಿಡಿಓಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮೇಲ್ವಿಚಾರಣೆಗೆ ಸೂಚನೆ: ನಮ್ಮ ಗ್ರಾಮಕ್ಕೆ ನೀರು ಸಿಗುತ್ತಿಲ್ಲ ಎಂದು ಬೇಸಿಗೆಯ ಅವಧಿಯಲ್ಲಿ ಯಾವುದೇ ಗ್ರಾಮಸ್ಥರಿಂದ ದೂರುಗಳು ಬರಬಾರದು. ಪಿಡಿಓಗಳು ಪಂಚಾಯತ್ ವ್ಯಾಪ್ತಿಯ

3ನೇ ಪುಟಕ್ಕೆ

ಗ್ರಾಮೀಣ ಭಾಗದಲ್ಲಿ ಜಿಪಂ ಸಿಇಓ ಈಶ್ವರ ಕಾಂದೂ ಪ್ರವಾಸ

ಇಕೋ ಪಾರ್ಕ್, ಅಂಗನವಾಡಿ ಕೇಂದ್ರಗಳಿಗೆ ಭೇಟಿ; ಪರಿಶೀಲನೆ



ರಾಯಚೂರು ಫೆಬ್ರವರಿ 12

ರಾಯಚೂರು ತಾಲ್ಲೂಕಿನ ಚಿಕ್ಕಸೂಗೂರು ಗ್ರಾಮ ಪಂಚಾಯತಿಯ ವ್ಯಾಪ್ತಿಯ ಇಕೋ ಪಾರ್ಕ್ ಹಾಗೂ ಅಂಗನವಾಡಿ ಕೇಂದ್ರಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಫೆ.12ರಂದು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಚಿಕ್ಕಸೂಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪ್ರಗತಿ ಹಂತದಲ್ಲಿರುವ ಇಕೋ ಪಾರ್ಕ್‌ಗೆ ಭೇಟಿ ನೀಡಿ ಕಾಮಗಾರಿಯನ್ನು ಶೀಘ್ರದಲ್ಲೇ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ನಿರ್ಮಿತಿ ಕೇಂದ್ರದ ಜೆಇ ಸಂತೋಷ ಅವರಿಗೆ ಸೂಚನೆ ನೀಡಿದರು.

ನಂತರ ಪಾರ್ಕ್‌ನಲ್ಲಿರುವ ವೀರಗಲ್ಲುಗಳ ಮಾಹಿತಿ ಸಂಗ್ರಹಿಸುವುದು ಮತ್ತು ಒಂದೆಡೆ ಅವುಗಳನ್ನು ಸುವ್ಯವಸ್ಥಿತವಾಗಿ ಜೋಡಿಸಿ ಸುರಕ್ಷಿತವಾಗಿ ಸಂರಕ್ಷಣೆ ಮಾಡಲು ಸಂಬಧಿಸಿದ ಅಧಿಕಾರಿ ಸಿಬ್ಬಂದಿಗೆ ಸೂಚನೆ ನೀಡಿದರು.

ನಂತರ ಅಂಗನವಾಡಿ ಕೇಂದ್ರಕ್ಕೆ ತೆರಳಿದಾಗ ಕೇಂದ್ರವು ಮುಚ್ಚಿರುವುದನ್ನು ಕಂಡು ಸಿಇಓ ಅವರು ಅಸಮಾಧಾನ ವ್ಯಕ್ತಪಡಿಸಿದರು. ಇನ್ನು ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು. ಅಂಗನವಾಡಿಗೆ ದಾಖಲಾಗುವ ಪ್ರತಿ ಮಗುವಿಗೂ ಪೂರ್ಣ ಪ್ರಮಾಣದಲ್ಲಿ ಪೌಷ್ಠಿಕ ಆಹಾರ ಸಿಗುವಂತಾಗಬೇಕು. ಪ್ರತಿದಿನವೂ ಮಕ್ಕಳ ಹಾಜರಾತಿಯನ್ನು ಪರಿಶೀಲಿಸಬೇಕು. ಹಾಜರಾತಿಯ

3ನೇ ಪುಟಕ್ಕೆ

ದಿ, 15 ರಂದು ಬಹು ಭಾಷಾ ಶಾಯರಿ ಕವಿಗೋಷ್ಠಿ ಹಾಗೂ ಸುಗಮ ಸಂಗೀತ ಕಾರ್ಯಕ್ರಮ

ಕೊಪ್ಪಳ,ಫೆ.12-ಶ್ರೀ ನಿಮಿಷಾಂಬ ಪ್ರಕಾಶನ, ಶ್ರೀ ನಿಮಿಷಾಂಬ ಆರ್ಟ್ಸ್ ಗ್ಯಾಲರಿ ಕಿನ್ನಾಳ ವತಿಯಿಂದ ಸುಜ್ಞಾನ ದೀವಿಗೆ ತ್ರೈಮಾಸಿಕ ಸರಣಿ ಕಾರ್ಯಕ್ರಮ ಅಂಗವಾಗಿ ತಾಲೂಕಿನ ಕಿನ್ನಾಳ ಗ್ರಾಮದ ಕೊಪ್ಪಳ ರಸ್ತೆಯಲ್ಲಿರುವ ಗ್ರಾಮದ ಸ್ವಾಗತ ಕಮಾನ್ ಹತ್ತಿರ ಇರುವ ಹಸನ್ಮುಖಿ ಸ್ಥಳದಲ್ಲಿ ಇದೇ ದಿ, 15 ರ ರವಿವಾರ ಬೆಳಗ್ಗೆ 10 ಗಂಟೆಗೆ ಬಹುಭಾಷಾ ಶಾಯಿರಿ ಕವಿಗೋಷ್ಠಿ ಹಾಗೂ ಸುಗಮ ಸಂಗೀತ ಕಾರ್ಯಕ್ರಮ ಜರುಗಲಿದೆ ಎಂದು ಸಂಘಟಕರಾದ ಶಿಕ್ಷಕ ಪ್ರಕಾಶಕ ಶ್ರೀನಿವಾಸ್ ಚಿತ್ರಗಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ,

ಸಮಾರಂಭದ ದಿವ್ಯ ಸಾನಿಧ್ಯವನ್ನು ಮುಂಡರಗಿ ಅನ್ನದಾನಿಶ್ವರ ಶಾಖಾ ಮಠ ಕುಕನೂರಿನ ಪರಮಪೂಜ್ಯ ಡಾ, ಮಹಾದೇವ ಮಹಾಸ್ವಾಮಿಗಳವರು ಸಾನಿಧ್ಯ ವಹಿಸಲಿದ್ದು ಸಿರಿಗನ್ನಡ ವೇದಿಕೆ ರಾಜ್ಯ ಅಧ್ಯಕ್ಷ ಜಿ.ಎಸ್. ಗೋನಾಳ ರವರ ಅಧ್ಯಕ್ಷತೆಯಲ್ಲಿ ಕಿನ್ನಾಳ ಗ್ರಾಮ ಹಿರಿಯರಾದ ವೆಂಕಟೇಶ್ವರ ರಾವ್ ದೇಸಾಯಿ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದಾರೆ, ಗದುಗಿನ ಸಾಹಿತಿ ಮರಳುಸಿದ್ದಪ್ಪ ದೊಡ್ಡಮನಿ ಯವರು ಶಾಯಿರಿ ಸಾಗಿ ಬಂದ ದಾರಿ ಒಂದು ಪಕ್ಷಿ ನೋಟ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ, ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿಗಳಾದ ಡಾ, ಫಕೀರಪ್ಪ ವಜ್ರಬಂಡಿ, ಎಂ ಬಿ ಅಳವಂಡಿ, ವೀರಣ್ಣ ನಿಂಗೋಜಿ ಮತ್ತು ಹಿರಿಯ ಪತ್ರಕರ್ತ ಎಂ ಸಾಧಿಕ್ ಅಲಿ ಪಾಲ್ಗೊಳ್ಳಲಿದ್ದಾರೆ, ಅಲ್ಲದೆ ಕಿನ್ನಾಳ



ಗ್ರಾಮದ ಹಿರಿಯರಾದ ಮತ್ತು ಸಮಾಜದ ಅಧ್ಯಕ್ಷರಾದ ಪರಶುರಾಮ್ ಚಿತ್ರಗಾರ, ಮತ್ತು ಕಿನ್ನಾಳ ಗ್ರಾಮದ ಮುಸ್ಲಿಂ ಸಮಾಜದ ಅಧ್ಯಕ್ಷರಾದ ಮಾಬು ಸಾಬ್ ಹೀರಾಳ, ಅಲ್ಲದೆ ಕೊಪ್ಪಳದ ಹಿರಿಯ ಉರ್ದು ಸಾಹಿತಿ ಶಮೀಮುನ್ನಿಸಾ ಬೇಗ ಹುನುಗುಂದ್ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳಲಿದ್ದಾರೆ, ವೀರಭದ್ರಪ್ಪ ಶಿವ ಸಿಂಪಿ ಮಾದಿನೂರು ಮತ್ತು ನಾಮದೇವ್, ಚಿತ್ರಗಾರ್ ಕಿನ್ನಾಳರವರು ಸುಗಮ ಸಂಗೀತ ಕಾರ್ಯಕ್ರಮ ನೀಡಲಿದ್ದಾರೆ,

ಶಾಯರಿಗೋಷ್ಠಿಯ ಅಧ್ಯಕ್ಷತೆಯನ್ನು ಸಾಹಿತಿ ಮತ್ತು ಕವಿ ಯಲ್ಲಪ್ಪ ಹರ್ನಾಳಗಿ ವಹಿಸಲಿದ್ದು ಕವಿಗಳಾದ ಅನ್ವರ್ ಹುಸೇನ್, ಕೊಪ್ಪಳ ,ಅರುನಾ ನರೇಂದ್ರ ಕೊಪ್ಪಳ, ಎಂ ಬದಿಯುದ್ದೀನ್ ಅಹಮದ್ ನವೀದ, ವಿಜಯಲಕ್ಷ್ಮಿ ಕೊಟ್ಟಗಿ, ಈರಪ್ಪ ಬಿಜಲೀ, ಕೊಟ್ರೇಶ್ ಜವಳಿ ಗದಗ್, ಎಂ ವಿಚಾರತ್ ಅಲಿ,ಶಿವಾ ಪ್ರಸಾದ ಹಾದಿಮನಿ, ಮೌಲಾನ ಮಹಮ್ಮದ್ ಅಲಿ ಹಿಮಾಯತಿ, ಮತ್ತು ಹನುಮಂತ ಸೋಮನ ಕಟ್ಟಿ, ಬೆಂಗಳೂರು ರವರುಗಳು ಪಾಲ್ಗೊಂಡು ತಮ್ಮ ಕನ್ನಡ ಮತ್ತು ಉರ್ದು ಕವನ ವಾಚನ ಮಾಡಲಿದ್ದಾರೆ ಎಂದು ಕಾರ್ಯಕ್ರಮ ಸಂಘಟಕರಾದ ಶ್ರೀ ನಿಮಿಷಾಂಬ ಪ್ರಕಾಶನದ ಮುಖ್ಯಸ್ಥ ಶ್ರೀನಿವಾಸ ಚಿತ್ರಗಾರ, ಶ್ರೀ ನಿಮಿಷಾಂಬ ಆರ್ಟ್ ಗ್ಯಾಲರಿ ಸಂಚಾಲಕಿ ಶ್ರೀಮತಿ ವಿದ್ಯಾವತಿ ಚಿತ್ರಗಾರ ಹಾಗೂ ಯುವ ಸಂಘಟಕರಾದ ಭಾಸ್ಕರ್ ರಾವ್ ಚಿತ್ರಗಾರ ಜಂಟಿ ಪ್ರಕಟಣೆಯಲ್ಲಿ ತಿಳಿಸಿ ಸರ್ವರನ್ನು ಸ್ವಾಗತಿಸಿದ್ದಾರೆ,

ಹುಮನಾಬಾದ್‌ನಲ್ಲಿ ಕಾರ್ಮಿಕ ಸಂಘಟನೆಗಳಿಂದ ಬೈಕ್ ರ್‍ಯಾಲಿ



ಹುಮನಾಬಾದ್,ಫೆ.12-

ಫೆ.12 ರಂದು ನಡೆಯುವ ದೇಶವ್ಯಾಪಿ ಮುಷ್ಕರದ ಪ್ರೂರ್ವಭಾವಿಯಾಗಿ ಹುಮನಾಬಾದ್ ಪಟ್ಟಣದಲ್ಲಿ ಕಾರ್ಮಿಕ ಸಂಘಟನೆಗಳಿಂದ ಬುಧವಾರ ಬೈಕ್ ರ್‍ಯಾಲಿ ನಡೆಯಿತು.

ಬೈಕ್ ರ್‍ಯಾಲಿಯು ಮುಂಜಾನೆ ಸುಮಾರು 11 ಗಂಟೆಗೆ ಪ್ರಾರಂಭವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಾಗಿ ಮುಷ್ಕರದ ಬಗ್ಗೆ ಪ್ರಚಾರ ನಡೆಸಲಾಯಿತು. ರ್‍ಯಾಲಿಯಲ್ಲಿ ಕೇಂದ್ರ ಸರಕಾರದ ಧೋರಣೆ ವಿರುದ್ಧ ಘೋಷಣೆಗಳು ಕೂಗಲಾಯಿತು.

ರ್‍ಯಾಲಿಯ ಕೊನೆಯಲ್ಲಿ ಬಸವರಾಜ್ ಮಾಳಗೆ ಅವರು ಮಾತನಾಡಿ, ಲೂಟಿ ಹೊಡೆದು ಹೊರದೇಶಕ್ಕೆ ಓಡಿ ಹೋದವರನ್ನು ಬಿಟ್ಟ ಕೇಂದ್ರ ಸರಕಾರ ಹಂತ ಹಂತವಾಗಿ ಕಾರ್ಮಿಕರಿಗೆ ತೊಂದರೆ ನೀಡುತ್ತದೆ. ಎಲ್ಲ ಕ್ಷೇತ್ರದಲ್ಲಿ ಖಾಸಗಿಕರಣ ಮಾಡುತ್ತಿದೆ. ಆದ್ದರಿಂದ ಕೂಲಿ ಕಾರ್ಮಿಕರೆಲ್ಲ ಕುಳಿತು ಅವರಿಗೆ ಎಚ್ಚರಿಸುವುದಕ್ಕಾಗಿ ಈ ಮುಷ್ಕರ ಹಮ್ಮಿಕೊಂಡಿದ್ದೇವೆ ಎಂದು ಹೇಳಿದರು.

ಫೆ.12ರ ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಭವಾನಿ ಮಂದಿರದ ಆವರಣದಲ್ಲಿ ಎಲ್ಲರೂ ಸೇರುತ್ತಿದ್ದೇವೆ. ಮುಷ್ಕರದಲ್ಲಿ ತಾಲೂಕಿನ ರೈತರು, ವ್ಯಾಪಾರಸ್ಥರು, ಸಾರ್ವಜನಿಕರು ಹಾಗೂ ದುಡಿಯುವ ಜನರು ಪಾಲ್ಗೊಳ್ಳಬೇಕು ಎಂದು ಮನವಿ ಮಾಡಲಾಯಿತು.

ರೇಖಾ ಅವರು ಮಾತನಾಡಿ, ಮೊದಲು ಕಾರ್ಮಿಕ ಸಂಹಿತೆಯಲ್ಲಿ 29 ಕೋಡ್ ಗಳಿದ್ದವು. ನಂತರ ಅವುಗಳನ್ನು 19 ಮಾಡಲಾಯಿತು. ಇವಾಗ ಆ ಕೋಡ್ ಗಳು 4ಕ್ಕೆ ತಂದು ನಿಲ್ಲಿಸಲಾಗುತ್ತಿದೆ. ಇದನ್ನು ನಾವು ಖಂಡಿಸುತ್ತೇವೆ ಎಂದು ಹೇಳಿದರು.

ಕಟ್ಟಡ ಕಾರ್ಮಿಕ ಸಂಘಟನೆಯ ಅಧ್ಯಕ್ಷ ಗೌಸುದ್ದಿನ್ ಅವರು ಮಾತನಾಡಿ, ಈ ದೇಶವ್ಯಾಪಿ ಮುಷ್ಕರಕ್ಕೆ ಕಾರ್ಮಿಕರು, ಸಾರ್ವಜನಿಕರು, ವ್ಯಾಪಾರಸ್ಥರು ಹಾಗೂ ಮಹಿಳೆಯರು, ಪುರುಷರು ಎಲ್ಲರೂ ಬೆಂಬಲ ನೀಡಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ರ್‍ಯಾಲಿಯಲ್ಲಿ ಶಶಿಕಾಂತ್ ಡಾಂಗೆ, ಪ್ರಭು, ಸಂತೋಷ್, ರೇಷ್ಮಾ, ಜಗದೇವಿ, ಜೇಮ್ಸ್ ಹಾಗೂ ಈಶ್ವರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಎಸ್ ಐಆರ್ ವಿರುದ್ಧ ಸ್ಲಂ ಜನಾಂದೋಲನ ಕರ್ನಾಟಕ ಸಂಘಟನೆ ಪ್ರತಿಭಟನೆ

ಕಲಬುರಗಿ,ಫೆ.12-

ಸಂವಿಧಾನಬದ್ಧ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಕೇಂದ್ರ ಸರಕಾರದ ಕರಾಳ ಎಸ್.ಐ.ಆರ್ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಿ ಅದರ ವಿರುದ್ಧ ರಾಜ್ಯ ಸರ್ಕಾರ ನಿರ್ಣಯ ಕೈಗೊಳ್ಳಬೇಕು ಎಂದು ಆಗ್ರಹಿಸಿ ಸ್ಲಂ ಜನಾಂದೋಲನ ಕರ್ನಾಟಕ ಕಲಬುರಗಿ ಜಿಲ್ಲಾ ಘಟಕದ ವತಿಯಿಂದ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿಪತ್ರ ಸಲ್ಲಿಸಿದರು. ಎಸ್.ಐ.ಆರ್ ಪ್ರಕ್ರಿಯೆಯಿಂದ ಬಡವರು, ಕಾರ್ಮಿಕರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರ ಮತದಾನದ ಹಕ್ಕಿಗೆ ಧಕ್ಕೆ ಉಂಟಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಚುನಾವಣಾ ಆಯೋಗವು ಈಗಾಗಲೇ 12 ರಾಜ್ಯಗಳಲ್ಲಿ ಎಸ್.ಐ.ಆರ್ ಪ್ರಕ್ರಿಯೆ ಕೈಗೊಂಡಿದ್ದು, ಈ ಪ್ರಕ್ರಿಯೆಯಲ್ಲಿ ಲಕ್ಷಾಂತರ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಬಿಹಾರ, ಉತ್ತರ ಪ್ರದೇಶ, ರಾಜಸ್ಥಾನ, ಮಧ್ಯಪ್ರದೇಶ, ತಮಿಳುನಾಡು, ಪಶ್ಚಿಮ ಬಂಗಾಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಮತದಾರರ ಹೆಸರುಗಳನ್ನು ದೊಡ್ಡ ಪ್ರಮಾಣದಲ್ಲಿ ತೆಗೆದುಹಾಕಲಾಗಿದೆ ಎಂದು ದೂರಿದರು. ಇದೇ ಮಾದರಿಯನ್ನು ಕರ್ನಾಟಕದಲ್ಲಿಯೂ ಜಾರಿಗೆ ತರುವ ಪ್ರಯತ್ನ ನಡೆಯುತ್ತಿದೆ ಎಂಬ ಆತಂಕವನ್ನು ವ್ಯಕ್ತಪಡಿಸಿದರು.

ಪಶ್ಚಿಮ ಬಂಗಾಳ ಸೇರಿದಂತೆ ಕೆಲವು ರಾಜ್ಯ ಸರ್ಕಾರಗಳು ಎಸ್.ಐ.ಆರ್ ವಿರುದ್ಧ ಕಾನೂನು ಹೋರಾಟ ಆರಂಭಿಸಿರುವುದನ್ನು ಉಲ್ಲೇಖಿಸಿ ಕರ್ನಾಟಕ ಸರ್ಕಾರವೂ ಇದೇ ರೀತಿಯ ದೃಢ ನಿಲುವು ತಾಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷೆ ಗೌರಮ್ಮ ಮಾಕಾ, ಸಂಚಾಲಕರಾದ ರೇಣುಕಾ ಸರಡಗಿ, ಶರಣು ಕಣ್ಣಿ, ಸುನಿತಾ ಕೊಳ್ಳೂರ, ಸುಗರಾ ಬೇಗಂ, ಕಲಾವತಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಎಸ್ ಐಆರ್ ವಿರುದ್ಧ ಸ್ಲಂ ಜನಾಂದೋಲನ ಕರ್ನಾಟಕ ಸಂಘಟನೆ ಪ್ರತಿಭಟನೆ



ಕಲಬುರಗಿ,ಫೆ.12-

ಸಂವಿಧಾನಬದ್ಧ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಕೇಂದ್ರ ಸರಕಾರದ ಕರಾಳ ಎಸ್.ಐ.ಆರ್ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಿ ಅದರ ವಿರುದ್ಧ ರಾಜ್ಯ ಸರ್ಕಾರ ನಿರ್ಣಯ ಕೈಗೊಳ್ಳಬೇಕು ಎಂದು ಆಗ್ರಹಿಸಿ ಸ್ಲಂ ಜನಾಂದೋಲನ

ಕರ್ನಾಟಕ ಕಲಬುರಗಿ ಜಿಲ್ಲಾ ಘಟಕದ ವತಿಯಿಂದ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿಪತ್ರ ಸಲ್ಲಿಸಿದರು. ಎಸ್.ಐ.ಆರ್ ಪ್ರಕ್ರಿಯೆಯಿಂದ ಬಡವರು, ಕಾರ್ಮಿಕರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರ ಮತದಾನದ ಹಕ್ಕಿಗೆ ಧಕ್ಕೆ ಉಂಟಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಚುನಾವಣಾ ಆಯೋಗವು ಈಗಾಗಲೇ 12 ರಾಜ್ಯಗಳಲ್ಲಿ ಎಸ್.ಐ.ಆರ್ ಪ್ರಕ್ರಿಯೆ ಕೈಗೊಂಡಿದ್ದು, ಈ ಪ್ರಕ್ರಿಯೆಯಲ್ಲಿ ಲಕ್ಷಾಂತರ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಬಿಹಾರ, ಉತ್ತರ ಪ್ರದೇಶ, ರಾಜಸ್ಥಾನ, ಮಧ್ಯಪ್ರದೇಶ, ತಮಿಳುನಾಡು, ಪಶ್ಚಿಮ ಬಂಗಾಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಮತದಾರರ ಹೆಸರುಗಳನ್ನು ದೊಡ್ಡ ಪ್ರಮಾಣದಲ್ಲಿ ತೆಗೆದುಹಾಕಲಾಗಿದೆ ಎಂದು ದೂರಿದರು. ಇದೇ ಮಾದರಿಯನ್ನು ಕರ್ನಾಟಕದಲ್ಲಿಯೂ ಜಾರಿಗೆ ತರುವ ಪ್ರಯತ್ನ ನಡೆಯುತ್ತಿದೆ ಎಂಬ ಆತಂಕವನ್ನು ವ್ಯಕ್ತಪಡಿಸಿದರು.

ಪಶ್ಚಿಮ ಬಂಗಾಳ ಸೇರಿದಂತೆ ಕೆಲವು ರಾಜ್ಯ ಸರ್ಕಾರಗಳು ಎಸ್.ಐ.ಆರ್ ವಿರುದ್ಧ ಕಾನೂನು ಹೋರಾಟ ಆರಂಭಿಸಿರುವುದನ್ನು ಉಲ್ಲೇಖಿಸಿ ಕರ್ನಾಟಕ ಸರ್ಕಾರವೂ ಇದೇ ರೀತಿಯ ದೃಢ ನಿಲುವು ತಾಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷೆ ಗೌರಮ್ಮ ಮಾಕಾ, ಸಂಚಾಲಕರಾದ ರೇಣುಕಾ ಸರಡಗಿ, ಶರಣು ಕಣ್ಣಿ, ಸುನಿತಾ ಕೊಳ್ಳೂರ, ಸುಗರಾ ಬೇಗಂ, ಕಲಾವತಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಕಲಬುರಗಿ: ನದಿಗೆ ಹಾರಿ ಯುವಕ ಆತ್ಮಹತ್ಯೆ



ಕಲಬುರಗಿ,ಫೆ.12-

ಜೀವನದಲ್ಲಿ ಜಿಗುಪ್ಸೆಗೊಂಡು ಯುವಕನೋರ್ವ ನಗರದ ಹೊರ ವಲಯದಲ್ಲಿರುವ ಕುರಿಕೋಟಾ ಸೇತುವೆ ಮೇಲಿಂದ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬುಧವಾರ ಬೆಳಕಿಗೆ ಬಂದಿದೆ.

ನಗರದ ರೇವಣಸಿದ್ದೇಶ್ವರ ಕಾಲೋನಿಯ ನಿವಾಸಿ ಮಲ್ಲಿಕಾರ್ಜುನ ರಾಚಪ್ಪ ಪಾಟೀಲ್ (36) ಆತ್ಮಹತ್ಯೆ ಮಾಡಿಕೊಂಡ ಯುವಕ.

ಮಲ್ಲಿಕಾರ್ಜುನ್ ಪಾಟೀಲ್ ಸೋಮವಾರ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಎರಡು ದಿನಗಳ ಶೋಧ ಕಾರ್ಯಾಚರಣೆ ಬಳಿಕ ಮೃತದೇಹ ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಕುರಿತು ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಿತ್ತಾಪುರದಲ್ಲಿ ಸರಕಾರದ ಯೋಜನೆಗಳ ಮಾಹಿತಿ ಪ್ರದರ್ಶನ ಮಳಿಗೆ ಉದ್ಘಾಟನೆ



ಕಲಬುರಗಿ,ಫೆ.12-

ಸರ್ಕಾರದ ಯೋಜನೆಗಳ ಪ್ರಚಾರ ಹಾಗೂ ಸಾಧನೆಗಳನ್ನು ಜನರಿಗೆ ತಿಳಿಸುವ ಉದ್ದೇಶದಿಂದ ಮಂಗಳವಾರದಿಂದ ಮೂರು ದಿನಗಳ ಕಾಲ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ರೂಪಿಸಿರುವ ವಿವಿಧ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಮಾಹಿತಿ ಪ್ರದರ್ಶನ ಮಳಿಗೆಯನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಬಿ. ಫೌಝಿಯಾ ತರನ್ನುಮ್ ತಿಳಿಸಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಚಿತ್ತಾಪುರ ಬಸ್ ನಿಲ್ದಾಣದಲ್ಲಿ ನಿರ್ಮಿಸಲಾದ ಮಾಹಿತಿ ಪ್ರದರ್ಶನ ಮಳಿಗೆಯನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು, ಜನರನ್ನು ನೇರವಾಗಿ ಸಂಪರ್ಕಿಸುವ ಈ ವಿನೂತನ ಪ್ರಚಾರ ಕಾರ್ಯದಿಂದ ಸರ್ಕಾರದ ಯೋಜನೆಗಳ ಕುರಿತು ಸಮಗ್ರ ಮಾಹಿತಿ ಜನಮಾನಸಕ್ಕೆ ತಲುಪಲಿದೆ ಎಂದರು.

ರಾಜ್ಯ ಸರ್ಕಾರದ ಅನುಸೂಚಿತ ಜಾತಿ/ಅನುಸೂಚಿತ ಪಂಗಡಗಳ ಕ್ರಿಯಾಯೋಜನೆಯಡಿಯಲ್ಲಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರಿಗಾಗಿ ರೂಪಿಸಿರುವ ವಿವಿಧ ಕಾರ್ಯಕ್ರಮಗಳ ಮಾಹಿತಿ ನೀಡಲು ಚಿತ್ತಾಪುರ ಸೇರಿದಂತೆ ರಾಜ್ಯದ ಇತರೆ ಆಯ್ದ ಮೀಸಲು ಕ್ಷೇತ್ರಗಳಲ್ಲಿ ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಚಿತ್ತಾಪುರ ತಾಲ್ಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಬೊಮ್ಮನಹಳ್ಳಿ, ಸೇಡಂ ವಿಭಾಗದ ಸಹಾಯಕ ಆಯುಕ್ತ ಪ್ರಭುರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಲಬುರಗಿ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ, ಚಿತ್ತಾಪುರ ತಹಶೀಲ್ದಾರ್ ನಾಗಯ್ಯ ಹಿರೇಮಠ, ಕೆಕೆಆರ್‌ಟಿಸಿ ಚಿತ್ತಾಪುರ ಡಿಪೋ ಮ್ಯಾನೇಜರ್ ಗೊಲ್ಲಾಳಪ್ಪ ಬಿರಾದರ್ ಸೇರಿದಂತೆ ತಾಲ್ಲೂಕು ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



ವಿದ್ಯಾಸಂಸ್ಥೆಗಳಲ್ಲೇ ಜಾತಿ, 371(ಜೆ) ಪ್ರಮಾಣಪತ್ರ ವಿತರಣೆ: ಜಿಲ್ಲಾಧಿಕಾರಿ

ಬಳ್ಳಾರಿ,ಫೆ.12-

ಜಿಲ್ಲೆಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ವಿದ್ಯಾಸಂಸ್ಥೆಗಳಲ್ಲಿಯೇ ಜಾತಿ ಪ್ರಮಾಣಪತ್ರ ಮತ್ತು 371(ಜೆ) ಪ್ರಮಾಣಪತ್ರಗಳನ್ನು ವಿತರಿಸುವ ವಿನೂತನ ಕಾರ್ಯಕ್ರಮ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ತಿಳಿಸಿದ್ದಾರೆ.

ಈ ಯೋಜನೆಯಡಿ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 10ನೇ ತರಗತಿ ವಿದ್ಯಾರ್ಥಿಗಳು ಹಾಗೂ ಕಾಲೇಜುಗಳಲ್ಲಿ ಓದುತ್ತಿರುವ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಅವರದೇ ವಿದ್ಯಾಸಂಸ್ಥೆಯಲ್ಲಿ ಪ್ರಮಾಣಪತ್ರಗಳನ್ನು ವಿತರಿಸಲಾಗುತ್ತದೆ.

ಸೌಲಭ್ಯ ಪಡೆಯಲು ವಿದ್ಯಾರ್ಥಿಗಳು ತಮ್ಮ ಪೋಷಕರ ಜಾತಿ ಪ್ರಮಾಣಪತ್ರ, ಆದಾಯ ಪ್ರಮಾಣಪತ್ರ, ವಾಸ ಪ್ರಮಾಣಪತ್ರ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಂಬಂಧಿತ ಶಾಲೆ ಅಥವಾ ಕಾಲೇಜಿಗೆ ಸಲ್ಲಿಸಬೇಕು. ದಾಖಲೆಗಳ ಪರಿಶೀಲನೆ ಬಳಿಕ ಪ್ರಮಾಣಪತ್ರಗಳನ್ನು ತ್ವರಿತವಾಗಿ ವಿತರಿಸಲಾಗುವುದು.

ಈ ಕಾರ್ಯಕ್ರಮದಿಂದ ಪೋಷಕರು ಸರ್ಕಾರಿ ಕಚೇರಿಗಳಿಗೆ ಸುತ್ತಾಟ ಮಾಡುವ ಅಗತ್ಯವಿಲ್ಲದೆ, ಮಕ್ಕಳ ವಿದ್ಯಾಸಂಸ್ಥೆಯಲ್ಲೇ ಪ್ರಮಾಣಪತ್ರಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಂಬಂಧಿತ ಶಾಲಾ-ಕಾಲೇಜುಗಳ ಮುಖ್ಯಸ್ಥರು, ಉಪನ್ಯಾಸಕರು ಹಾಗೂ ಆಡಳಿತ ಮಂಡಳಿಗಳು ಕಾರ್ಯಕ್ರಮ ಯಶಸ್ವಿಗೆ ಸಂಪೂರ್ಣ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ವಿಬಿ ಜಿರಾಮ್‌ಜಿ ಯೋಜನೆ ಬಗ್ಗೆ ಕಾಂಗ್ರೆಸ್‌ನಿಂದ ಅಪಪ್ರಚಾರ: ಅಮರನಾಥ್ ಪಾಟೀಲ್



ಅಫಜಲಪುರ, ಫೆ.12-

'ಮನರೇಗಾ ಹೆಸರು ಬದಲಿಸಿ ಮಹಾತ್ಮ ಗಾಂಧಿ ಅವರನ್ನು ಅವಮಾನಿಸಲಾಗಿದೆ ಎಂದು ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದೆ. ಜಿರಾಮ್‌ಜಿ ಯೋಜನೆ ಕುರಿತ ಸುಳ್ಳು ಆರೋಪಗಳ ಮಾಡುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಸೂಕ್ತ ಉತ್ತರ ನೀಡಬೇಕಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ್ ಪಾಟೀಲ್ ಹೇಳಿದರು.

ಪಟ್ಟಣದ ಶಾರದಾ ಕಲ್ಯಾಣ ಮಂಟಪದಲ್ಲಿ ಬಿಜೆಪಿ ಪಕ್ಷದಿಂದ 'ಜಿರಾಮ್‌ಜಿ' ಉದ್ಯೋಗ ಖಾತ್ರಿ ಯೋಜನೆಯ ಬಗ್ಗೆ ಅಪಪ್ರಚಾರ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಜನ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅಮರನಾಥ್ ಪಾಟೀಲ್, ರಾಜ್ಯದಲ್ಲಿ ವಿಬಿ ಜಿರಾಮ್ ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು. ರಾಜ್ಯ ಸರಕಾರ ತನ್ನ ಪಾಲಿನ ಅನುದಾನ ಬಿಡುಗಡೆ ಮಾಡಬೇಕು. ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು. ಜನರಿಗೆ ಉದ್ಯೋಗ ಭದ್ರತೆ ಕಲ್ಪಿಸಿದ ಯೋಜನೆಯ ವಿಚಾರದಲ್ಲಿ ರಾಜಕೀಯ ಮಾಡುವುದನ್ನು ಕಾಂಗ್ರೆಸ್ ಕೈಬಿಡಬೇಕು ಎಂದು ಆಗ್ರಹಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್ ಮಾತನಾಡಿ, ಮನರೇಗಾಗೆ 2005ರಲ್ಲಿ ಕಾನೂನು ಚೌಕಟ್ಟು ನೀಡಿ 2009ರಲ್ಲಿ ಮಹಾತ್ಮ ಗಾಂಧೀಜಿ ಹೆಸರು ಸೇರಿಸಲಾಯಿತು. ಅಭಿವೃದ್ಧಿಗೆ ಪೂರಕವಾಗಿ ಕೆಲ ಬದಲಾವಣೆ ಮಾಡಲಾಗಿದೆ. ಕೆಲಸದ ದಿನಗಳನ್ನು 100ರಿಂದ 125ಕ್ಕೆ ಹೆಚ್ಚಳ ಮಾಡಲಾಗಿದೆ. ಗ್ರಾಮದ ಅಭಿವೃದ್ಧಿಗೆ ಪೂರಕವಾಗಿ ಯೋಜನೆ ಅನುಷ್ಠಾನಕ್ಕೆ ತರಲಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ, ತಾಲೂಕು ಅಧ್ಯಕ್ಷ ವಿದ್ಯಾಧರ, ಶರಣಬಸಪ್ಪ ಪದಕಿ, ಧಾನು ಪತಾಟೆ, ಆನಂದ ಪಾಟೀಲ್, ಮಲ್ಲಿಕಾರ್ಜುನ ಲಿಂಗದಳ್ಳಿ, ಶೋಭಾ ಬಾಣಿ, ಚಂದಮ್ಮ ಪಾಟೀಲ್, ತನ್ವೀರ್ ಮಣ್ಣೂರ್, ಪ್ರಕಾಶ್ ಜಮಾದಾರ್, ಅರವಿಂದ್ ದೊಡ್ಮನಿ, ಚಿದಾನಂದ ಬಸರಗಿಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿವಾಜಿ ಹಿಂದೂ ಸಮಾಜದ ಶ್ರೇಷ್ಠ ರತ್ನ: ಸತೀಶ್ ಪಾಟೀಲ್

ಬೀದರ್, ಫೆ.12-

ಕರ್ನಾಟಕ ಮರಾಠ ಸಮುದಾಯ ಅಭಿವೃದ್ಧಿ ನಿಗಮ ಬೆಂಗಳೂರು, ಕರ್ನಾಟಕ ಸಾಹಿತ್ಯ ಸಂಘ, ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆಗಳ ವಿಜ್ಞಾನ ವಿಶ್ವವಿದ್ಯಾಲಯ ಬೀದರ್ ಹಾಗೂ ಕರ್ನಾಟಕ ಕಾಲೇಜಿನ ಇತಿಹಾಸ ವಿಭಾಗದ ಸಂಯುಕ್ತಾಶ್ರಯದಲ್ಲಿ ನಗರದ ಕರ್ನಾಟಕ ಕಾಲೇಜಿನಲ್ಲಿ ಏರ್ಪಡಿಸಿದ್ದ ಯುವ ನಾಯಕತ್ವಕ್ಕೆ ಛತ್ರಪತಿ ಶಿವಾಜಿ ಮಹಾರಾಜರ ಜೀವನ ದರ್ಶನ ಕುರಿತ ಎರಡು ದಿನಗಳ ಬಹುಶಿಸ್ತೀಯ ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಮಂಗಳವಾರ ವಿಧ್ಯುಕ್ತ ತೆರೆ ಬಿತ್ತು.



ಸಮಾರೋಪದಲ್ಲಿ ಮಾತನಾಡಿದ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಸತೀಶ್ ಪಾಟೀಲ್, ಮಹಾರಾಷ್ಟ್ರದ ಶಿವನೇರಿ ಕೋಟೆಯಲ್ಲಿ ಜನಿಸಿದ ಶಿವಾಜಿ ಮಹಾರಾಜರು ಹಿಂದೂ ಸಮಾಜದ ಶ್ರೇಷ್ಠ, ಅನರ್ಘ್ಯ ರತ್ನ. ಅವರ ಆದರ್ಶಗಳನ್ನು ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಾಯಕತ್ವದ ಗುಣ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ಕಾಳಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಗುರುಪ್ರಕಾಶ್ ಹೂಗಾರ ವಿಶೇಷ ಉಪನ್ಯಾಸ ನೀಡಿ, ಶಿವಾಜಿ ಧೈರ್ಯ, ಬಸವಣ್ಣನವರ ಜ್ಞಾನ, ಬುದ್ಧನ ಶಾಂತಿ, ಏಸು ಕ್ರಿಸ್ತರ ತಾಳ್ಮೆ ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ ಎಂದರು.

ಪರಿವರ್ತನ ಪಿಯು ಕಾಲೇಜಿನ ಅಧ್ಯಕ್ಷ ವೆಂಕಟೇಶ ಮೈಂದೆ, ಕರ್ನಾಟಕ ಕಾಲೇಜಿನ ಪ್ರಾಚಾರ್ಯ ಪ್ರೊ. ಸೋಮನಾಥ ಬಿರಾದಾರ, ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ, ಕಾರ್ಯದರ್ಶಿ ನಿಜಲಿಂಗಪ್ಪ ತಗಾರೆ, ಬಿ.ವಿ.ಭೂಮರಡ್ಡಿ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥೆ ಶಿವಲೀಲಾ ಮಠಪತಿ, ಔರಾದ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಸಂಜೀವಕುಮಾರ ತಾಂದಳೆ ಮತ್ತಿತರರು ಇದ್ದರು.

ಒಂದನೇಯ ಪುಟದಿಂದ

ಬೇಸಿಗೆಯಲ್ಲಿ ಎಲ್ಲಾ ಕಡೆಗಳಲ್ಲೂ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆಯಾಗಲಿ: ನಿತೀಶ್

ಕೊರತೆಯಾಗಿದೆ ಎಂದು ಮಸ್ಕಿ ಪುರಸಭೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ರಾಯಚೂರು ತಾಲೂಕಿನಲ್ಲಿ 15 ಕೆರೆಗಳಿದ್ದು ಎಲ್ಲ ಕೆರೆಗಳು ಭಾಗಶಃ ತುಂಬಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಮುದಗಲ್ ಪಟ್ಟಣದಲ್ಲಿ ಸದ್ಯಕ್ಕೆ ನೀರಿನ ತೊಂದರೆ ಇಲ್ಲ. ನಾರಾಯಣಪುರ ಡ್ಯಾಮನಿಂದ ಅವಶ್ಯಕ ಸಂದರ್ಭದಲ್ಲಿ ನೀರು ಪಡೆದುಕೊಳ್ಳುವುದಾಗಿ ಅಲ್ಲಿನ ಪುರಸಭೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ಸಿಟಿಗೆ ತೊಂದರೆಯಾಗದಿರಲಿ: ರಾಯಚೂರು ಸಿಟಿ ಮತ್ತು ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಕುಡಿವ ನೀರಿನ ಪರಿಸ್ಥಿತಿಯ ಬಗ್ಗೆ ಜಿಲ್ಲಾಧಿಕಾರಿಗಳು ಪಾಲಿಕೆಯ ಅಧಿಕಾರಿಗಳು ಮತ್ತು ತಹಸೀಲ್ದಾರ ಅವರಿಂದ ಮಾಹಿತಿ ಪಡೆದುಕೊಂಡರು. ಗಣೇಕಲ್ ಜಲಾಶಯ ಮತ್ತು ಅಲ್ಲಿನ ನೀರಿನ ನಿರ್ವಹಣೆ ಕುರಿತು ಗಮನ ಹರಿಸಿ ರಾಯಚೂರು ಸಿಟಿಗೆ ಸಮರ್ಪಕ ಕುಡಿವ ನೀರಿಗೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಲಿಂಗಸೂರು ತಾಲೂಕಿನಲ್ಲಿ ಅವ್ಯವಸ್ಥೆಯಾಗದಿರಲಿ: ಲಿಂಗಸೂರು ತಾಲೂಕಿನಲ್ಲಿ ಕಳೆದ ಬಾರಿ ಬೇಸಿಗೆಯ ಅವಧಿಯಲ್ಲಿ ಕುಡಿವ ನೀರು ಪೂರೈಕೆಯಲ್ಲಿ ಸ್ವಲ್ಪ ಮಟ್ಟಿಗೆ ವ್ಯತ್ಯಯ ಉಂಟಾಗಿತ್ತು. ಈ ವರ್ಷ ಹಾಗಾಗದಂತೆ ಸಾಕಷ್ಟು ಮುಂಜಾಗ್ರತೆ ವಹಿಸಬೇಕು. ಬೇಸಿಗೆ ಅವಧಿಯಲ್ಲಿ ಲಿಂಗಸೂರ ತಾಲೂಕಿಗೆ ಇಂತಿಷ್ಟು ಪ್ರಮಾಣದ ನೀರು ಬೇಕು ಎಂದು ನಾಂರಾಯಣಪುರ ಡ್ಯಾಮನ ಅಧಿಕಾರಿಗಳಿಗೆ ನೀರಿನ ಬೇಡಿಕೆಯ ಪತ್ರ ತುರ್ತು ರವಾನೆಗೆ ಕ್ರಮ ವಹಿಸಬೇಕು ಎಂದು ಸಹಾಯಕ ಆಯುಕ್ತರು, ತಹಸೀಲ್ದಾರರು, ಪುರಸಭೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಪ್ರತಿ ತಿಂಗಳು ಟಾಸ್ಕಪೋರ್ಸ್ ಸಭೆಗಳಾಗಲಿ: ಎಲ್ಲ ತಾಲೂಕುಗಳಲ್ಲಿ ಪ್ರತಿ ತಿಂಗಳು ಕಡ್ಡಾಯವಾಗಿ ಟಾಸ್ಕಪೋರ್ಸ್ ಸಭೆಗಳು ನಡೆಯುವಂತೆ ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಮನ್ವಯ ವಹಿಸಿ ಅಗತ್ಯ ವ್ಯವಸ್ಥೆ ಮಾಡಬೇಕು. ಕಾಲರಾ, ವಾಂತಿ ಬೇದಿ ಪ್ರಕರಣಗಳು ದಾಖಲು ಆಗದ ಹಾಗೆ ಮುಂಜಾಗ್ರತೆ ವಹಿಸಿ ನೀರಿನ ಪರೀಕ್ಷೆಗೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಗ್ರಾಮೀಣ ಕುಡಿವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಖಾಸಗಿ ಬೋರವೆಲ್‌ಗೆ ಆದ್ಯತೆ ನೀಡಿ: 2025-2026ನೇ ವರ್ಷದಲ್ಲಿ ಸಾಕಷ್ಟು ಮಳೆಯಾಗಿ ಅಂತರ್ಜಲ ನೀರಿನ ಮಟ್ಟ ಸುಧಾರಿಸಿದೆ. ಹಾಗಾಗಿ ನೀರಿನ ಸಮಸ್ಯೆ ಕಂಡು ಬಂದಲ್ಲಿ ಬೋರವೆಲ್ ಕೊರೆಯಿಸಲು ಕ್ರಮ ವಹಿಸಬೇಕು. ಕೊಳವೆಬಾವಿ ವಿಫಲವಾದಲ್ಲಿ ಹತ್ತಿರದ ಖಾಸಗಿ ಬೋರವೆಲ್‌ಗಳಿಂದಲೇ ನೀರು ಪೂರೈಕೆಗೆ ಹೆಚ್ಚಿನ ಒತ್ತು ಕೊಡಬೇಕು. ಟ್ಯಾಂಕರ್ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬಾರದು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಪಂ ಸಿಇಓ ನಿರ್ದೇಶನ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕಾಂದೂ ಅವರು ಮಾತನಾಡಿ, ಯಾವುದೇ ಕಡೆಗಳಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಪೈಪಲೈನ್ ದುರಸ್ತಿಗೆ ಒತ್ತು ಕೊಡಬೇಕು. ಮೇಲ್ಮಟ್ಟದ ಜಲಾಗಾರಗಳನ್ನು ಪ್ರತಿ ತಿಂಗಳು ಕಡ್ಡಾಯವಾಗಿ ಶುಚಿಗೊಳಿಸಬೇಕು. ಕಾಲಕಾಲಕ್ಕೆ ನೀರಿನ ಪರೀಕ್ಷೆ ನಡೆಸಿಯೇ ನೀರು ಪೂರೈಕೆಗೆ ಒತ್ತು ಕೊಡಬೇಕು. ಈ ಬಗ್ಗೆ ಎಲ್ಲ ತಾಲೂಕಿನ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಎಲ್ಲ ಪಿಡಿಓಗಳು ಗಮನ ಹರಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ವಿಡಿಯೋ ಸಂವಾದ ಸಭೆಯಲ್ಲಿ ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣೆಪ್ಪ ಕಲಶೆಟ್ಟಿ, ಆಯಾ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಕೆಬಿಜೆಎನ್‌ಎಲ್‌ನ ಅಧಿಕಾರಿ ಬಸನಗೌಡ, ಆರೋಗ್ಯ ಇಲಾಖೆಯ ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಗಣೇಶ್, ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆಯ ಅಭಿಯಂತರ ನಾಗರಾಜ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದ ಪ್ರಾದೇಶಿಕ ಆಯುಕ್ತರು

ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಸಿಟಿಯಲ್ಲಿ ಒಟ್ಟು 35 ವಾರ್ಡಗ ಳಿದ್ದು, ಕೃಷ್ಣಾ ಮತ್ತು ತುಂಗಭದ್ರಾ ನದಿಗಳು ನಗರದಿಂದ 20 ರಿಂದ 30 ಕಿ.ಮೀ ದೂರದಲ್ಲಿವೆ. ಕೃಷ್ಣ ನದಿಯಿಂದ ಶೇ.80ರಷ್ಟು ಮತ್ತು ತುಂಗಭದ್ರಾ ನದಿಯಿಂದ ಶೇ.20 ಪ್ರಮಾಣದಷ್ಟು ನೀರು ಪಡೆಯಲಾಗುತ್ತಿದೆ. ಚಿಕ್ಕಸೂಗೂರನಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕ ಮತ್ತು ರಾಂಪೂರ ಬಳಿಯಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕದ ಮೂಲಕ ನದಿ ನೀರನ್ನು ಶುದ್ಧೀಕರಣಗೊಳಿಸಿ ನಗರಕ್ಕೆ ನೀರು ಪೂರೈಸಲಾಗುತ್ತಿದೆ.

ರಾಯಚೂರು ಸಿಟಿಯಲ್ಲಿ ಒಟ್ಟು 650 ಕಿ.ಮೀ ರಸ್ತೆ ಜಾಲದ ವ್ಯವಸ್ಥೆಯಿದೆ. ಇತ್ತೀಚಿನ ಒಳಚರಂಡಿ ಜಾಲದ ಉದ್ದ 300 ಕಿ.ಮೀ ಇರುತ್ತದೆ. 73,000 ಮನೆಗಳು ಇರುತ್ತವೆ. ಸಿಟಿಯಲ್ಲಿ ಇದುವರೆಗೆ 431 ಕಿ.ಮೀ ನಷ್ಟು ಒಳಚರಂಡಿ ಜಾಲದ ವ್ಯವಸ್ಥೆ ಇದ್ದು ಈ ಪೈಕಿ 300 ಕಿ.ಮೀ ಜಾಲ ಕಾರ್ಯನಿರ್ವಹಿಸುತ್ತಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಭೆಗೆ ವಿವರಿಸಿದರು.

ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸೌಂದರ್ಯೀಕರಣಗೊಳಿಸಲು ಬೇಸಿಗೆ ಕಾಲದಲ್ಲಿ ತಾಪಮಾನವನ್ನು ನಿಯಂತ್ರಿಸಿ ಪರಿಸರದ ಸಮತೋಲನವನ್ನು ವಾಯು ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ವಿಶೇಷವಾಗಿ ವಾಯುಮಾಲಿನ್ಯ ನಿಯಂತ್ರಿಸಿ ನಗರವನ್ನು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರ ನೆಡುವುದು ಅವಶ್ಯವಿರುವ ಕಾರಣ 99.99 ಲಕ್ಷ ರೂ ವೆಚ್ಚದಲ್ಲಿ ಕಾಮಗಾರಿ ನಿರ್ವಹಿಸಲು ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸಿದ್ದು ಆಡಳಿತಾತ್ಮಕ ಅನುಮೋದನೆ ಪಡೆದು ಕಾರ್ಯಗತಗೊಳಿಸಲಾಗುವುದು ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಗ್ರಾಮೀಣ ಭಾಗದಲ್ಲಿ ಜಿಪಂ ಸಿಇಓ ಈಶ್ವರ ಕಾಂದೂ ಪ್ರವಾಸ

ಇಕೋ ಪಾರ್ಕ್, ಅಂಗನವಾಡಿ ಕೇಂದ್ರಗಳಿಗೆ ಭೇಟಿ; ಪರಿಶೀಲನೆ

ಪ್ರಮಾಣ ಹೆಚ್ಚಳದ ಬಗ್ಗೆ ಗಮನ ಕೊಡಬೇಕು ಎಂದು ಕಾರ್ಯಕರ್ತೆಯರಿಗೆ ಸಿಇಓ ಅವರು ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ನಡೆಸುತ್ತಿರುವ ಅಂಗನವಾಡಿ ಕೇಂದ್ರಗಳು ಗ್ರಾಮೀಣ ಮತ್ತು ಅವಕಾಶ ವಂಚಿತ ಮಕ್ಕಳ ಶೈಕ್ಷಣಿಕ ಬುನಾದಿಯ ಕೇಂದ್ರಗಳು. ಇಲ್ಲಿ ಮಕ್ಕಳಿಗೆ ನೀಡುವ ಆರೈಕೆ, ಶಿಕ್ಷಣ ಮತ್ತು ಆಹಾರ ಎಲ್ಲವೂ ಮುಖ್ಯವಾಗುತ್ತದೆ. ಪ್ರತಿ ಅಂಗನವಾಡಿ ಕೇಂದ್ರವು ಮಾದರಿಯಾಗಿ ಕಾರ್ಯ ನಿರ್ವಹಿಸುವ ಹಾಗೆ ಅಂಗನವಾಡಿ ಕೇಂದ್ರಗಳ ಬಲವರ್ಧನೆಗೆ ಒತ್ತು ಕೊಡಬೇಕು ಎಂದು ಸಿಇಓ ಅವರು ಇದೆ ವೇಳೆ ಹಾಜರಿದ್ದ ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ನಿರ್ದೇಶಕ ಶಿವಪ್ಪ, ಚಿಕ್ಕಸುಗೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸರೋಜಮ್ಮ, ನಿರ್ಮಿತ ಕೇಂದ್ರ ಸಹಾಯಕ ಅಭಿಯಂತರ ಸಂತೋಷ ಸೇರಿದಂತೆ ಇತರರು ಇದ್ದರು.

ರಾಯಚೂರು ಗ್ರಾಮೀಣ ಕ್ಷೇತ್ರದ ಟಾಸ್ಕೋರ್ಸ್ ಸಭೆ ಬೇಸಿಗೆ ನಿರ್ವಹಣೆಗೆ ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ:ಬಸನಗೌಡ ದದ್ದಲ್ ಸೂಚನೆ

ಎಲ್ಲ ಗ್ರಾಮಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಬಗ್ಗೆ ಗ್ರಾಮಸ್ಥರಿಂದ ತಿಳಿದುಕೊಳ್ಳಬೇಕು. ಗ್ರಾಮಸ್ಥರೊಂದಿಗೆ ಉತ್ತಮ ಬಾಂಧವ್ಯ ಇಟ್ಟುಕೊಂಡು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಶಾಸಕರು, ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಕಾಲಕಾಲಕ್ಕೆ ಕಂದಾಯ ಮತ್ತು ಪಿಡಿಓಗಳ ಸಭೆ ನಡೆಸಿ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಶಾಸಕರು ನಿರ್ದೇಶನ ನೀಡಿದರು.

ವಾರದ ಗಡುವು: ನೀವು ನಿಯಮಿತವಾಗಿ ಗ್ರಾಮಗಳಿಗೆ ಭೇಟಿ ನೀಡುತ್ತಿದ್ದೀರಾ? ಆಯಾ ಗ್ರಾಮಗಳಲ್ಲಿ ನೀರಿನ ಪರಿಸ್ಥಿತಿ ಏನಿದೆ ಎಂಬುದು ತಿಳಿದಿದೆಯಾ? ಎಂದು ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಶಾಸಕರು ಪ್ರಶ್ನಿಸಿದರು. ಗ್ರಾಮೀಣ ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಕೆರೆಗಳ ಸ್ಥಿತಿ, ಕುಡಿವ ನೀರಿನ ಪರಿಸ್ಥಿತಿ ಸೇರಿದಂತೆ ಸಮಗ್ರ ಮಾಹಿತಿಯನ್ನು ನೀಡುವಂತೆ ಆರ್‌ಡಬ್ಲ್ಯೂಎಸ್ ಅಧಿಕಾರಿಗಳಿಗೆ ಶಾಸಕರು ವಾರದ ಗಡುವು ವಿಧಿಸಿದರು.

ವರದಿ ಒಪ್ಪಿಸಿದ ಅಧಿಕಾರಿಗಳು: ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಗ್ರಾಮ, ಹೋಬಳಿವಾರು ಕುಡಿವ ನೀರಿನ ವಾಸ್ತವ ಪರಿಸ್ಥಿತಿಯ ಬಗ್ಗೆ ಸಮಗ್ರ ಅವಲೋಕಿಸಿದರು. ತಮ್ಮ ತಮ್ಮ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬೇಸಿಗೆ ನಿರ್ವಹಣೆಗೆ ಮಾಡಿಕೊಂಡ ಸಿದ್ಧತೆ ಬಗ್ಗೆ ಆಯಾ ಪಿಡಿಓಗಳು ಸಭೆಗೆ ವರದಿ ಒಪ್ಪಿಸಿದರು.

ಸಭೆಯಲ್ಲಿ ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನಗೌಡ ತಲಮಾರಿ, ತಹಸೀಲ್ದಾರ ಸುರೇಶ ವರ್ಮಾ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ಅರಣ್ಯ ಸಂರಕ್ಷಣಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕುಮಟ್ಟದ ಅಧಿಕಾರಿಗಳು, ವಿವಿಧ ಗ್ರಾಮ ಪಂಚಾಯತಗಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರು.

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಂಜಿನ ಮೆರವಣಿಗೆ



ಕಲಬುರಗಿ,ಫೆ.12-

ಜೆಸಿಟಿಯು ಹಾಗೂ ಎಸ್‌ಕೆಎಂ ರೈತ-ಕಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಗರದ ಸೂಪರ್ ಮಾರ್ಕೆಟ್ ಚೌಕ್ ಪೊಲೀಸ್ ಠಾಣೆಯಿಂದ ಜಗತ್ ಸರ್ಕಲ್ ವರೆಗೆ ಬುಧವಾರ ರಾತ್ರಿ ಪಂಜಿನ ಮೆರವಣಿಗೆ ನಡೆಯಿತು.

ಮೆರವಣಿಗೆಯ ವೇಳೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವಿರುದ್ಧ ಘೋಷಣೆಗಳು ಮೊಳಗಿದವು. ಜಗತ್ ವೃತ್ತದಲ್ಲಿ ನಡೆದ ಬಹಿರಂಗ ಸಭೆಯಲ್ಲಿ ರೈತ-ಕಾರ್ಮಿಕ ವಿರೋಧಿ ನೀತಿಗಳನ್ನು ಖಂಡಿಸಲಾಯಿತು.

ಅತಿವೃಷ್ಟಿಗೆ ಪರಿಹಾರ ತಕ್ಷಣ ನೀಡಬೇಕು, ಬೆಳೆ ವಿಮೆ ಹಣ ಬಿಡುಗಡೆ ಮಾಡಬೇಕು, ತೊಗರಿಗೆ ಪ್ರೋತ್ಸಾಹಧನ ನೀಡಬೇಕು, 4 ಲೇಬರ್ ಕೋಡ್‌ಗಳನ್ನು ರದ್ದುಪಡಿಸಬೇಕು, ವಿ.ಬಿ.ಜಿರಾಮಜಿ ಯೋಜನೆ ರದ್ದುಗೊಳಿಸಬೇಕು, ವಿದ್ಯುತ್ ಮಸೂದೆ ಹಾಗೂ ಬೀಜ ಮಸೂದೆ ಹಿಂಪಡೆಯಬೇಕು, ರೈತರ ಸಾಲ ಮನ್ನಾ ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ. ಪ್ರತಿಭಟನೆಯಲ್ಲಿ ಕೆಪಿಆರ್‌ಎಸ್ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಎಂ.ಬಿ. ಸಜ್ಜನ್, ಪ್ರಭುದೇವ ಯಳಸಂಗಿ, ವಿ.ಬಿ. ಜಿರಾಮಜಿ, ಎಸ್.ಎಂ. ಶರ್ಮಾ, ಗೌರಮ್ಮ ಪಿ. ಪಾಟೀಲ್, ಜಾವೇದ ಮುಗಳಿ ಪತಕೆ, ನಾಗಯ್ಯ ಸ್ವಾಮಿ, ದಿಲೀಪ್ ಕುಮಾರ್ ನಾಗೂರೆ, ಸೆಖಮ್ಮ ಕುರಿ, ಮಂಜುಳಾ ಪೂಜಾರಿ, ಎಸ್.ಎಚ್. ಪತಕೆ, ನಾಗೇಂದ್ರಪ್ಪ ಥಂಬೆ, ಸಿದ್ದು ಎಸ್.ಎಲ್., ಕರೆಪ್ಪ ಕರಗೊಂಡ, ಪದ್ಮಿನಿ ಕಿರಣಗಿ, ಶಾಂತಾ ಸರಡಗಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಹಂಪಿ ಉತ್ಸವದ ಅಂಗವಾಗಿ ಬೈಕ್ ರ‍್ಯಾಲಿ: ಜಿಲ್ಲಾಧಿಕಾರಿಯಿಂದ ಚಾಲನೆ

ವಿಜಯನಗರ, ಫೆ.12-

ಐತಿಹಾಸಿಕ ಹಂಪಿ ಉತ್ಸವದ ಮಹತ್ವವನ್ನು ಜನತೆಗೆ ತಲುಪಿಸುವ ಹಾಗೂ ಪ್ರವಾಸೋದ್ಯಮವನ್ನು ಉತ್ತೇಜಿಸುವ ಉದ್ದೇಶದಿಂದ ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಆಯೋಜಿಸಲಾಗಿದ್ದ ಬೈಕ್ ರ‍್ಯಾಲಿಗೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಸ್ವತಃ ಬೈಕ್‌ನಲ್ಲಿ ಪಾಲ್ಗೊಂಡು ಅಧಿಕೃತ ಚಾಲನೆ ನೀಡಿದರು.

ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಈ ರ‍್ಯಾಲಿಯಲ್ಲಿ ಸುಮಾರು 150ಕ್ಕೂ ಹೆಚ್ಚು ಬೈಕ್‌ಗಳು ಭಾಗವಹಿಸಿತು. ಜಿಲ್ಲಾಧಿಕಾರಿಗಳ ಕಚೇರಿಯಿಂದ ಆರಂಭವಾದ ರ‍್ಯಾಲಿ ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ, ಅನಂತಶಯನಗುಡಿ, ಕೊಂಡನಾಯಕನಹಳ್ಳಿ, ಮಲಪನಗುಡಿ, ಗಾಳೆಮ್ಮನಗುಡಿ ಹಾಗೂ ಕಡ್ಡಿರಾಂಪುರ ಮಾರ್ಗವಾಗಿ ಹಂಪಿಯ ಶ್ರೀ ವಿರೂಪಾಕ್ಷ ದೇಗುಲದವರೆಗೆ ಯಶಸ್ವಿಯಾಗಿ ತಲುಪಿತು.

ರ‍್ಯಾಲಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ, ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮುಹಮ್ಮದ್ ಅಲಿ ಅಕ್ರಮ್ ಷಾ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಹನುಮಸಾಗರ: ಪಟ್ಟಣದತ್ತ ಹೆಜ್ಜೆ; ಸೌಲಭ್ಯಗಳ ವಿಸ್ತರಣೆ ನಿರೀಕ್ಷೆ

ಕೊಪ್ಪಳ, ಫೆ.12-

ಪಟ್ಟಣ ಪಂಚಾಯಿತಿ ಸ್ಥಾನಮಾನದಿಂದ ಹೆಚ್ಚುವರಿ ಮೂಲಸೌಕರ್ಯ ದೊರೆಯಲಿದ್ದು ನಗರಾಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಅವಕಾಶ ಸಿಗಲಿದೆ. ಸ್ವಚ್ಛ ಭಾರತ್ ಮಿಷನ್ (ನಗರ), ಅಮೃತ್ ಯೋಜನೆ, ನಗರ ಬಡವರ ಪುನರ್ವಸತಿ ಯೋಜನೆ ಮುಂತಾದ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳ ಅನುದಾನ ಪಡೆಯಲು ಪಟ್ಟಣ ಅರ್ಹತೆ ಪಡೆದಿದೆ.

ವ್ಯಾಪಾರ ಹಾಗೂ ವಾಣಿಜ್ಯ ಚಟುವಟಿಕೆಗಳು ಚೇತರಿಕೆ ಪಡೆಯಲಿವೆ. ಮಾರುಕಟ್ಟೆ ಅಭಿವೃದ್ಧಿ, ಶಾಪಿಂಗ್ ಸಂಕೀರ್ಣ ನಿರ್ಮಾಣ ಹಾಗೂ ಖಾಸಗಿ ಹೂಡಿಕೆ ಹೆಚ್ಚಳಕ್ಕೆ ದಾರಿ ತೆರೆದಿದೆ. ಇದರಿಂದ ಸ್ಥಳೀಯವಾಗಿ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ.

ಕೆಲ ಸವಾಲುಗಳೂ ಇದ್ದು ಆಸ್ತಿ ತೆರಿಗೆ, ವಾಣಿಜ್ಯ ಪರವಾನಗಿ ಶುಲ್ಕ ಸೇರಿದಂತೆ ನಗರ ವ್ಯಾಪ್ತಿಯ ತೆರಿಗೆ ವಿಧಿಸುವುದರಿಂದ ನಾಗರಿಕರ ಮೇಲೆ ಆರ್ಥಿಕ ಹೊರೆ ಹೆಚ್ಚಾಗುವ ಆತಂಕವೂ ಇದೆ. ಅಕ್ರಮವಾಗಿ ಕಟ್ಟಡ ನಿರ್ಮಾಣ, ಭೂ ಅತಿಕ್ರಮಣ, ಸಂಚಾರ ದಟ್ಟಣೆ, ಕಸದ ನಿರ್ವಹಣೆ ಮೊದಲಾದ ಸಮಸ್ಯೆಗಳು ಆಡಳಿತ ವ್ಯವಸ್ಥೆಗೆ ಸವಾಲಾಗಿ ಪರಿಣಮಿಸಲಿವೆ.



ನಗರ ನಿಯಮಾವಳಿಗಳಿಗೆ ಒಳಪಡುವುದರಿಂದ ಮುಖ್ಯವಾಗಿ ಜನರಲ್ಲಿ ಅರಿವು ಮೂಡಿಸುವ ಅಗತ್ಯ ಇದೆ. ಕಟ್ಟಡ ನಿರ್ಮಾಣಕ್ಕೆ ನಕ್ಷೆ ಅನುಮೋದನೆ, ವಾಣಿಜ್ಯ ಮಳಿಗೆಗಳಿಗೆ ಪರವಾನಗಿ ಹಾಗೂ ಭೂ ಬಳಕೆ ವರ್ಗಾವಣೆ ನಿಯಮಗಳು ಕಡ್ಡಾಯವಾಗಲಿವೆ. ಇದರಿಂದ ನಿಯಮಾನುಸಾರ ಅಭಿವೃದ್ಧಿ ಸಾಧ್ಯವಾದರೂ ಆರಂಭಿಕ ಹಂತದಲ್ಲಿ ಜನರಿಗೆ ಕೆಲ ಅಸೌಕರ್ಯಗಳು ಉಂಟಾಗುವ ಸಾಧ್ಯತೆ ಇದೆ.

ಪರಿಣಾಮಕಾರಿ ಆಡಳಿತ ಮತ್ತು ಜನಸಹಭಾಗಿತ್ವದ ಮೇಲೆ ಪಟ್ಟಣ ಪಂಚಾಯಿತಿಯ ಯಶಸ್ಸು ಅವಲಂಬಿತವಾಗಿದೆ. ಪಾರದರ್ಶಕ ಆಡಳಿತ, ಸಮರ್ಪಕ ಯೋಜನೆಗಳ ಅನುಷ್ಠಾನ ಹಾಗೂ ಪರಿಸರ ಸಂರಕ್ಷಣೆ ಮತ್ತು ಸಾಂಸ್ಕೃತಿಕ ಮೌಲ್ಯಗಳ ರಕ್ಷಣೆ ಅಗತ್ಯ ಎಂಬ ಅಭಿಪ್ರಾಯ ಸಾರ್ವಜನಿಕರದ್ದು.

ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಶಾಶ್ವತ ಯೋಜನೆಗಳ ಅನುಷ್ಠಾನ ವೈಜ್ಞಾನಿಕ ಕಸದ ವಿಲೇವಾರಿ ವ್ಯವಸ್ಥೆ ಒಳಚರಂಡಿ (ಯುಜಿಡಿ) ಜಾಲದ ವಿಸ್ತರಣೆ ಅಭಿವೃದ್ಧಿ ಉತ್ತ ರಸ್ತೆಗಳ ನಿರ್ಮಾಣ ಬೀದಿ ದೀಪಗಳ ವ್ಯವಸ್ಥೆ ಸುಧಾರಣೆ ಪಾರ್ಕ್ ಹೈಟೆಕ್ ಬಸ್ ನಿಲ್ದಾಣ ಸಾರ್ವಜನಿಕ ಮೂತ್ರಾಲಯ / ಶೌಚಾಲಯ ನಿರ್ಮಾಣ ನಗರ ಆರೋಗ್ಯ ಕೇಂದ್ರಗಳ ಸ್ಥಾಪನೆ ಅಗ್ನಿಶಾಮಕ ಸೇವೆ ತುರ್ತು ಸೇವೆಗಳ ವ್ಯವಸ್ಥೆ

ವಾರ್ಡ್ ವಿಂಗಡಣೆ ಪ್ರಕ್ರಿಯೆಗೆ ಚಾಲನೆ

ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವಾರ್ಡ್ ವಿಂಗಡಣೆ ಪ್ರಕ್ರಿಯೆಗೂ ಚಾಲನೆ ನೀಡಲಾಗಿದ್ದು ಈ ಬಗ್ಗೆ ಬಿಎಲ್‌ಒಗಳ ಸಭೆ ನಡೆದಿದೆ. ಪಟ್ಟಣದಲ್ಲಿ ಒಟ್ಟು 19 ವಾರ್ಡ್‌ಗಳನ್ನು ಅಂದಾಜಿಸಲಾಗಿದ್ದು ವಿಂಗಡಣೆ ವೇಳೆ ನಕ್ಷೆಯನ್ನು ಪರಿಗಣಿಸಿ ಗಡಿ ಕಾಪಾಡುವುದು ಅತ್ಯಂತ ಮುಖ್ಯ. ಮತದಾರರು ಬೇರೆಬೇರೆ ವಾರ್ಡ್‌ಗೆ ಸೇರದಂತೆ ನೋಡಿಕೊಳ್ಳಬೇಕು. ಜನ ತಮ್ಮ ವಾರ್ಡ್‌ನಲ್ಲೇ ಮತದಾನ ಮಾಡಲು ಅನುಕೂಲವಾಗುವಂತೆ ಬಿಎಲ್‌ಒಗಳು ಸೂಕ್ತ ಯೋಜನೆ ರೂಪಿಸಬೇಕು ಎಂದು ಮುಖ್ಯಾಧಿಕಾರಿ ರೆಡ್ಡಿ ರಾಯನಗೌಡ ಸೂಚಿಸಿದ್ದಾರೆ. ಮುಖ್ಯ ರಸ್ತೆ ಸರ್ಕಾರಿ ಕಟ್ಟಡ ಸರ್ಕಾರಿ ಶಾಲೆಗಳಿರುವ ಪ್ರದೇಶಗಳನ್ನು ಆಧಾರಿಸಿ ಪ್ರಾಯೋಗಿಕವಾಗಿ ಸಮರ್ಪಕವಾದ ವಾರ್ಡ್ ಗಡಿಗಳನ್ನು ಗುರುತಿಸಬೇಕು. ಕ್ಷೇತ್ರ ಮಟ್ಟದಲ್ಲಿ ಸಮಗ್ರ ಸಮೀಕ್ಷೆ ನಡೆಸಿ ಗೊಂದಲ ಉಂಟಾಗದಂತೆ ಕಾರ್ಯ ಪೂರ್ಣಗೊಳಿಸಬೇಕು ಎಂದು ರೆಡ್ಡಿ ರಾಯನಗೌಡ ಹೇಳಿದ್ದಾರೆ. ಈ ಹಿಂದೆ ಗ್ರಾಮ ಪಂಚಾಯಿತಿಯಾಗಿದ್ದ ಸಂದರ್ಭದಲ್ಲಿ 14 ವಾರ್ಡ್‌ಗಳಿದ್ದವು. ಈಗ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿರುವ ಹಿನ್ನೆಲೆಯಲ್ಲಿ ಜನಸಂಖ್ಯೆ ಹಾಗೂ ಮತದಾರರ ಪ್ರಮಾಣವನ್ನು ಪರಿಗಣಿಸಿ ಹೆಚ್ಚುವರಿ ವಾರ್ಡ್ ವಿಂಗಡಣೆ ಮಾಡಲಾಗುತ್ತಿದೆ. ಪ್ರತಿ ವಾರ್ಡ್‌ನಲ್ಲಿ ಸರಾಸರಿ 800ರಿಂದ 900ರವರೆಗೆ ಮತದಾರರು ಹೊಂದಿರುವಂತೆ ಸಮತೋಲನ ಕಾಯ್ದುಕೊಳ್ಳಬೇಕು ಎಂದು ರೆಡ್ಡಿ ರಾಯನಗೌಡ ಹೇಳಿದರು. ವಾರ್ಡ್ ವಿಂಗಡಣೆ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸಿ ಮತದಾರರು ಬೇರೆ ವಾರ್ಡ್‌ಗೆ ಸೇರದಂತೆ ನೋಡಿಕೊಳ್ಳಲಾಗುತ್ತದೆ. ಜನರ ಸಹಕಾರ ಮತ್ತು ಜನಪ್ರತಿನಿಧಿಗಳ ಜವಾಬ್ದಾರಿಯುತ ಕಾರ್ಯದಿಂದ ಹನುಮಸಾಗರವನ್ನು ಮಾದರಿ ಪಟ್ಟಣವಾಗಿ ರೂಪಿಸಲಾಗುವುದು ಎಂದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಬಾಲಕಾರ್ಮಿಕತೆ ಹಾಗೂ ಬಾಲ್ಯ ವಿವಾಹ ತಡೆಗಟ್ಟಲು ಸರ್ಕಾರಿ ತರ ಸಂಸ್ಥೆಗಳ ಪಾತ್ರ ಬಹಳ ಮುಖ್ಯ : ಎಸ್‌ಪಿ

ಅಡಿಯಲ್ಲಿಯೇ ಬರುವುದರಿಂದ ಆ ಪದ್ಧತಿ ಕಂಡುಬಂದರೂ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗಬೇಕು, ಪ್ರಸ್ತುತ ಈ ಒಂದು ತಿಂಗಳಲ್ಲಿ 7 ಫೋಕ್ಸೋ ಕೇಸ್‌ಗಳು ದಾಖಲಾಗಿದ್ದು, ಬಾಲ್ಯವಿವಾಹ ತಡೆಗಟ್ಟಲು ಮತ್ತು ಈ ಅನಿಷ್ಠ ಪದ್ದತಿಯ ಕುರಿತು ಜನರಲ್ಲಿ ಜಾಗೃತಿ ಮೂಡಸಲು ಪ್ರತಿಯೊಬ್ಬರು ಮುಂದಾಗಬೇಕು ಎಂದರು.

ಅಕ್ಕ ಪಡೆ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಇದಕ್ಕೆ ಸಂಬಂಧಿಸಿದಂತೆ ಶಾಲಾ ಕಾಲೇಜು ಬಳಿ ಪುಂಡಾಟ ನಡೆಸುವ ಯುವಕರು ಹೆಣ್ಣು ಮಕ್ಕಳನ್ನು ಚುಡಾಯಿಸುವುದು ಕಂಡು ಬಂದರೆ ಅಕ್ಕ ಪಡೆಯವರು ಪುಂಡರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಮುಂದಾಗುತ್ತಾರೆ ಎಂದರು.

ಪ್ರಿಯಾಂಕ ಕಾರ್ಮಿಕ ನಿರೀಕ್ಷಕರು ಬಾಲಕಾರ್ಮಿಕರನ್ನು ತಡೆಗಟ್ಟಲು ಕ್ರಮಗಳ ಬಗ್ಗೆ ಮಾತನಾಡಿದರು. ಎಸ್ ಜೆ ಕುಮಾರಸ್ವಾಮಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಯಚೂರು ಇವರು ಅತಿ ಹೆಚ್ಚಾಗಿ ಜನರಿಗೆ ಹಾಗೂ ಪಾಲಕರಿಗೆ ತಮ್ಮ ತಮ್ಮ ಮಕ್ಕಳಿಗೆ ಮೊಬೈಲ್ ಫೋನ್ ಕೊಡುವುದನ್ನು ತಪ್ಪಿಸಬೇಕು ಅಂದಾದಾಗ ಮಾತ್ರ ಮಕ್ಕಳು ಆನ್ಲೈನ್ ಗೇಮು ಹಾಗೂ ವಿವಿಧ ವಿಡಿಯೋಗಳನ್ನು ನೋಡಿ ಮನಸ್ಸೆಲ್ಲಾ ಕೆಡಿಸಿಕೊಂಡು ವಿವಿಧ ರೀತಿಯ ದುಶ್ಚಟಗಳಿಗೆ ಮಕ್ಕಳು ಬಲಿಯಾಗುವುದನ್ನು ತಪ್ಪಿಸಬೇಕು ಎಂದು ತಿಳಿಸಿದರು. ಕೆ ಪಿ ಅನಿಲ್ ಕುಮಾರ್ ಕ್ರೈ ಸಂಸ್ಥೆಯ ಯೋಜನೆ ಅಧಿಕಾರಿಗಳು ಇವರು ಬಾಲ್ಯ ವಿವಾಹ ಬಾಲಕಾರ್ಮಿಕರ ಬಗ್ಗೆ ಮಾತನಾಡಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ ಇವರು ಬಾಲ್ಯ ವಿವಾಹ ಹಾಗೂ ಬಾಲಕಾರ್ಮಿಕ ಒಳಗೆ ಆಗಿರುವ ಮಕ್ಕಳನ್ನು ಹೇಗೆ ನಿಯಂತ್ರಣ ಮಾಡಬೇಕು ಎಂಬುದರ ಕುರಿತು ತಿಳಿಸಿದರು. ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ ಇವರು ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಟೀಚರ್ಸ್ ಗಳ ಜೊತೆಗೆ ಸುದೀರ್ಘವಾಗಿ ಸಂವಾದ ನಡೆಯಿತು. ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಡಬ್ಲ್ಯೂ ಸಿ ಪಿ ಸಿ ಸಮಿತಿಯ ಬಲವರ್ಧನೆಗೊಳಿಸುವುದರ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸಿದರು. ಇನ್ನು ಮುಂತಾದ ವಿವಿಧ ಇಲಾಖೆ ಅಧಿಕಾರಿಗಳು ಸಹ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ, ಶಿಕ್ಷಣ ಇಲಾಖೆಯ ಭೀಮರಾಯ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ, ಕಾರ್ಮಿಕ ನಿರೀಕ್ಷಕಿ ಪ್ರಿಯಾಂಕ, ಸಿಡಿಪಿಓ ಮನ್ಸೂರ್ ಅಹ್ಮದ್, ಡಿಂಗ್ರಿ ನರಸಪ್ಪ, ಕ್ರೈ ಸಂಸ್ಥೆಯ ಸಲಹೆಗಾರರಾದ ಕೆ.ಪಿ ಅನೀಲ್ ಕುಮಾರ, ತಾಯಪ್ಪ ಹೆಗ್ಗಸನಹಳ್ಳಿ, ವಿವಿಧ ತಾಲೂಕುಗಳಲ್ಲಿ ಕಾರ್ಯ ನಿರ್ವಹಿಸಿವಾ ಸಮುದಾಯದ ಸಂಘಟಕರು ಹಾಗೂ ಕಾರ್ಕ್ ಟೀಚರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಅನೇಕರಿದ್ದರು.

ಸಂತಕವಿ ಸರ್ವಜ್ಞ ಜಯಂತಿ ಅರ್ಥಪೂರ್ಣ ಆಚರಣೆಗೆ ಸೂಚನೆ

ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು ಎಂದು ಸಮಾಜದ ಮುಖಂಡರಲ್ಲಿ ಕೋರಿದರು. ವೇದಿಕೆ ಕಾರ್ಯಕ್ರಮದಲ್ಲಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸುವಂತೆ ಸಮಾಜದ ಮುಖಂಡರು ಮನವಿ ಮಾಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ಸಂತ ಕವಿ ಸರ್ವಜ್ಞ ಅವರ ಕುರಿತು ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಗಳಿಗೆ ಗುರುತಿಸಿ ಆಹ್ವಾನ ನೀಡಬೇಕು ಎಂದು ಮುಖಂಡರಾದ ವೀರಭದ್ರಪ್ಪ, ವೈ.ಸುರೇಂದ್ರ ಬಾಬು, ಶ್ರೀಸಾಯಿಬಾಬು, ಕೆ.ಗೋವಿಂದ್ ಇತರರು ಮನವಿ ಮಾಡಿದರು.

ಸಭೆಯಲ್ಲಿ ಸಮಾಜದ ಮುಖಂಡರಾದ ಪ್ರವೀಣ್ ಕುಮಾರ್, ನಿಂಗಪ್ಪ, ಶಶಿಕುಮಾರ್, ಕುರುಮೂರ್ತಿ, ಶಿವರಾಜಪ್ಪ, ವ.ಆಂಜಿನೇಯ್ಯ, ತಿಮ್ಮಪ್ಪ, ಲಕ್ಷ್ಮಿರೆಡ್ಡಿ, ಹನುಮಂತ ರೆಡ್ಡಿ ಮಲ್ಲಪೂರು, ರಾಕೇಶ್ ಕುಮಾರ್ ಸೇರಿದಂತೆ ಇನ್ನಿತರ ಮುಖಂಡರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

ರಮಝಾನ್ ಪ್ರಯುಕ್ತ ಶಾಸಕರ ನೇತೃತ್ವದಲ್ಲಿ ಸಭೆ

ಕಲಬುರಗಿ,ಫೆ.12-

ರಮಝಾನ್ ಪ್ರಯುಕ್ತ ಉತ್ತರ ಮತಕ್ಷೇತ್ರದ ಶಾಸಕಿ ಕನೀಜ್ ಫಾತೀಮಾ ಮತ್ತು ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ನೇತೃತ್ವದಲ್ಲಿ ಬುಧವಾರ ಐವನ್ ಎ ಶಾಹಿ ಅತಿಥಿ ಗೃಹದಲ್ಲಿ ಮಹಾನಗರ ಪಾಲಿಕೆ, ಜೆಎಸ್ಕಾಂ ಮತ್ತು ಪೊಲೀಸ್ ಅಧಿಕಾರಿಗಳ ವಿಶೇಷ ಸಭೆ ನಡೆಯಿತು.

ರಮಝಾನ್ ಉಪವಾಸ ಬಿಡುವ ಸಂಜೆ ನಾಲ್ಕು ಗಂಟೆಯ ನಂತರ ನಗರ ಪ್ರಮುಖ ಪ್ರದೇಶಗಳಲ್ಲಿ ಜನದಟ್ಟಣೆ ಉಂಟಾಗುತ್ತದೆ. ಸೂಕ್ಷ್ಮ ಬಡಾವಣೆಗಳಲ್ಲಿ ಯಾವುದೇ ರೀತಿ ಅಹಿತಕರ ಘಟನೆಗಳು ಮತ್ತು ಶಾಂತಿ ಸುವ್ಯವಸ್ಥೆಗೆ ಧಕ್ಕೆ ಆಗದಂತೆ ಪೊಲೀಸ್ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಮತ್ತು ಸಂಚಾರಕ್ಕೆ ವ್ಯತ್ಯಯ ಆಗದಂತೆ ಟ್ರಾಫಿಕ್ ವ್ಯವಸ್ಥೆ ಮಾಡಬೇಕು ಎಂದು ಶಾಸಕರು ಸೂಚನೆ ನೀಡಿದರು.

ಮಹಾನಗರ ಪಾಲಿಕೆಯ ಮಹಾಪೌರಾದ ವರ್ಷಾ ಜಾನೆ, ಉಪ ಮೇಯರ್ ತೃಪ್ತಿ ಲಾಖೆ ಅವರ ಸಮ್ಮುಖದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಶಾಸಕರು, ಉಪವಾಸದ ದಿನಗಳಲ್ಲಿ ನಿರಂತರ ವಿದ್ಯುತ್ ಸರಬರಾಜು, ರಾತ್ರಿ ವೇಳೆ ಬೀದಿ ದೀಪಗಳು, ನೀರಿನ ವ್ಯವಸ್ಥೆ, ಸ್ವಚ್ಛತೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕಾಂಗ್ರೆಸ್ ಮುಖಂಡ ಫರಾಜ್ ಉಲ್ ಇಸ್ಲಾಂ, ಪಾಲಿಕೆ ಸದಸ್ಯ ಸೈಯದ್ ಅಹ್ಮದ್, ಅಜ್ಮಲ್ ಗೋಲಾ ಸೇರಿದಂತೆ ಪಾಲಿಕೆ ಸದಸ್ಯರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದರು.

ಅಳತೆ ಪ್ರಕಾರ ಕೆಲಸ ನಿರ್ವಹಿಸಿ: ಮಹಾಂತಗೌಡ ಪಾಟೀಲ

ಗಂಗಾವತಿ, ಫೆ.12-

ಗಂಗಾವತಿ ತಾಲ್ಲೂಕಿನ ಚಿಕ್ಕಜಂತಕಲ್ ಗ್ರಾ.ಪಂ ವ್ಯಾಪ್ತಿಯ ಹೊಸಳ್ಳಿ ಗ್ರಾಮದಲ್ಲಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ತಾ.ಪಂ ಸಹಾಯಕ ನಿರ್ದೇಶಕ ಮಹಾಂತಗೌಡ ಪಾಟೀಲ ಭೇಟಿ ನೀಡಿ ಪರಿಶೀಲನೆ ನಡೆಸಿದರು

ಬಳಿಕ ಮಾತನಾಡಿದ ಅವರು, ಕೂಲಿಕಾರರು ತಮಗೆ ವಹಿಸಿದ ಅಳತೆ ಪ್ರಕಾರ ಕೆಲಸ ನಿರ್ವಹಿಸಬೇಕು. ನಾಲಾ ಹೂಳೆತ್ತುವುದರಿಂದ ರೈತರಿಗೆ ಅನುಕೂಲ ಆಗಲಿದೆ. ಪ್ರತಿ ದಿನ ಎರಡು ಸಾರಿ ಕಡ್ಡಾಯವಾಗಿ ಎ???ಂಎಂಎಸ್ ಹಾಜರಾತಿ ಹಾಕಿಸಿಕೊಳ್ಳಬೇಕು. ಗ್ರಾ.ಪಂ ಸಿಬ್ಬಂದಿ ಪಾರದರ್ಶಕವಾಗಿ ಹಾಜರಾತಿ ಹಾಕಬೇಕು ಎಂದು ಸೂಚನೆ ನೀಡಿದರು.

ಪಿಡಿಓ ರವೀಂದ್ರ ಕುಲಕರ್ಣಿ, ತಾಂತ್ರಿಕ ಸಂಯೋಜಕ ಬಸವರಾಜ ಜಟಗಿ, ತಾಲ್ಲೂಕು ಐಇಸಿ ಸಂಯೋಜಕ ಬಾಳಪ್ಪ ತಾಳಕೇರಿ, ತಾಂತ್ರಿಕ ಸಹಾಯಕ ಶರಣಯ್ಯ, ಗ್ರಾ.ಪಂ ಡಿಇಓ ಆನಂದ, ಬಿಎಫ್‌ಟಿ ಮಾರುತಿ, ಜಿಕೆಎಂ ಶ್ರೀದೇವಿ ಸೇರಿ ಕಾಯಕ ಬಂಧುಗಳು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ವಂದೇ ಮಾತರಂ ಕಡ್ಡಾಯದ ಹಿಂದಿರುವುದು ದೇಶಭಕ್ತಿಯಲ್ಲ, ಪಶ್ಚಿಮ ಬಂಗಾಲ ಗೆಲ್ಲುವುದು!



ಕೇಂದ್ರ ಸರ್ಕಾರ ವಂದೇ ಮಾತರಂ ಗೀತೆ ಕಡ್ಡಾಯ ಮಾಡಿರುವುದರ ಹಿಂದೆ, ಭಾರತವು ಮುಸ್ಲಿಂ ದ್ವೇಷಿ ಹಿಂದೂ ರಾಷ್ಟ್ರವಾಗಬೇಕೆಂಬ ಇರಾದೆ ಇದೆ. ವಿರೋಧ ಪಕ್ಷಗಳ ಪ್ರಶ್ನೆಗಳಿಗೆ ಉತ್ತರ ಕೊಡಲಾಗದೆ ನುಣುಚಿಕೊಳ್ಳುವ, ದೇಶದ ಜನರ ದಿಕ್ಕು ತಪ್ಪಿಸುವ ಹುನ್ನಾರವಿದೆ. ಮುಖ್ಯವಾಗಿ ಬರಲಿರುವ ಪಶ್ಚಿಮ ಬಂಗಾಳ ಚುನಾವಣೆ ಗೆಲ್ಲಬೇಕಿದೆ.

ರಾಷ್ಟ್ರಗೀತೆ ಜನಗಣಮನದಂತೆ ಸರ್ಕಾರಿ ಕಾರ್ಯಕ್ರಮಗಳಲ್ಲಿ ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ ಬಂಕಿಮಚಂದ್ರ ಚಟರ್ಜಿ ಅವರು 1874ರಲ್ಲಿ ರಚಿಸಿದ ವಂದೇ ಮಾತರಂ ಗೀತೆಯನ್ನು ಹಾಡುವುದು ಕಡ್ಡಾಯಗೊಳಿಸಿ ಕೇಂದ್ರ ಗೃಹ ಸಚಿವಾಲಯ ಆದೇಶ ಹೊರಡಿಸಿದೆ.

ಆದೇಶದಲ್ಲಿ, ರಾಷ್ಟ್ರಗೀತೆಗೂ ಮುನ್ನ ವಂದೇ ಮಾತರಂನ 6 ಚರಣಗಳನ್ನು ಹಾಡಬೇಕು. ಹಾಡುವಾಗ ಎಲ್ಲರೂ ಕಡ್ಡಾಯವಾಗಿ ಎದ್ದು ನಿಲ್ಲಬೇಕು. ರಾಷ್ಟ್ರಗೀತೆಗೆ ಅಡ್ಡಿಪಡಿಸುವ ಅಥವಾ ಇತರರು ಗೌರವಿಸುವುದನ್ನು ತಡೆಯುವ ಯಾವುದೇ ವ್ಯಕ್ತಿಗೆ ಗರಿಷ್ಠ ಮೂರು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗುತ್ತದೆ ಎಂದು ತಿಳಿಸಲಾಗಿದೆ.

ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರದ ವಂದೇ ಮಾತರಂ ಗೀತೆ ಕಡ್ಡಾಯ ಆದೇಶ ಸಹಜವಾಗಿ ಜನರಲ್ಲಿ ರೋಮಾಂಚನ ಉಂಟು ಮಾಡುತ್ತದೆ. ಸ್ವಾತಂತ್ರ್ಯ ಹೋರಾಟದ ಹಾಡಾಗಿರುವ ಕಾರಣ, ದೇಶಭಕ್ತಿ, ರಾಷ್ಟ್ರೀಯತೆ ಮತ್ತು ಭಾರತೀಯ ಸಂಸ್ಕೃತಿಯನ್ನು ಧ್ವನಿಸುತ್ತದೆ. ಹೊಗಳಿಕೆಗೆ ಪಾತ್ರವಾಗುತ್ತದೆ.

ಅಸಲಿಗೆ, ಸ್ವಾತಂತ್ರ್ಯ ಹೋರಾಟದಲ್ಲಿ ಬಂಗಾಳದ ಹಿಂದೂ ರಾಷ್ಟ್ರವಾದಿ ಕವಿ-ಸಾಹಿತಿ ಬಂಕಿಮಚಂದ್ರರ ವಂದೇ ಮಾತರಂ ದೇಶಭಕ್ತರ ಘೋಷಣೆಯೇ ಆಗಿದ್ದರೂ, ಹಾಡಿನ ಪೂರ್ಣ ಪಠ್ಯವಿರುವ ಆನಂದ ಮಠ ಕಾದಂಬರಿ ಮುಸ್ಲಿಮರನ್ನು ದ್ವೇಷಿಸುವ ಮತ್ತು ಬ್ರಿಟಿಷರ ಪರವಿರುವ ಕಥನವಾಗಿತ್ತು.

ಸರ್ವಜನಹಿತವೇ ಮುಖ್ಯ ಎಂದು ನಂಬಿದ್ದ ಮಹಾತ್ಮ ಗಾಂಧಿಯವರು, 1937ರಲ್ಲಿಯೇ, ಹಿಂದೂಗಳು ಮತ್ತು ಮುಸ್ಲಿಮರು ಒಂದೇ ಸ್ಥಳದಲ್ಲಿ ಸೇರಿದಾಗ, ವಂದೇ ಮಾತರಂ ಹಾಡುವ ಕುರಿತಾಗಿ ಅವರಲ್ಲಿ ಜಗಳ ಉಂಟಾದರೆ ನಾನು ಸಹಿಸುವುದಿಲ್ಲ. ಹೀಗಾಗಿ, ಸಾರ್ವಜನಿಕ ಸ್ಥಳಗಳಲ್ಲಿ ವಂದೇ ಮಾತರಂನ್ನು ಹಾಡಬಾರದು ಎಂದು ನೆಹರೂಗೆ ಸಲಹೆ ನೀಡಿದ್ದರು.

ಹೀಗಾಗಿ ಆ ಹಾಡಿನ ಮೊದಲೆರಡು ಚರಣಗಳನ್ನು ಮಾತ್ರ ಹಾಡಬೇಕೆಂದು ಜವಾಹರಲಾಲ್ ನೆಹರೂ, ವಲ್ಲಭಭಾಯ್ ಪಟೇಲ್, ಸುಭಾಷ್ ಚಂದ್ರ ಬೋಸ್ ಹಾಗೂ ಇನ್ನಿತರ ಕಾಂಗ್ರೆಸ್ ನಾಯಕರನ್ನೊಳಗೊಂಡ ಸಮಿತಿ ತೀರ್ಮಾನಿಸಿತ್ತು. ಅದನ್ನು 1950ರ ನವಂಬರ್ 24ರಂದು ಸಂವಿಧಾನ ಸಭೆಯ ಅಧ್ಯಕ್ಷರಾಗಿದ್ದ ಬಾಬು ರಾಜೇಂದ್ರ ಪ್ರಸಾದರು ಅಧ್ಯಕ್ಷೀಯ ಹೇಳಿಕೆಯಾಗಿ ಘೋಷಿಸಿದ್ದರು. ಸಂವಿಧಾನ ಸಭೆ ಒಕ್ಕೊರಲಿನಿಂದ ಮಾನವತಾವಾದಿ-ರಾಷ್ಟ್ರವಾದಿ ರವೀಂದ್ರನಾಥ್ ಠಾಗೂರ್ ವಿರಚಿತ ಜನಗಣಮನವನ್ನು ರಾಷ್ಟ್ರಗೀತೆಯನ್ನಾಗಿ ಘೋಷಿಸಿತ್ತು.

ದೇಶದ ಇತಿಹಾಸ ಗೊತ್ತಿರುವ ಸಂಘ ಪರಿವಾರ ಮತ್ತದರ ಬಿಜೆಪಿ, ಇಷ್ಟು ದಿನ ಸುಮ್ಮನಿದ್ದು ಈಗ ಕೇಂದ್ರದಲ್ಲಿ ಅಧಿಕಾರದಲ್ಲಿರುವಾಗ, ಕಳೆದ ಡಿಸೆಂಬರ್‌ನಲ್ಲಿ, ವಂದೇ ಮಾತರಂ ಗೀತೆಗೆ 150 ವರ್ಷ ತುಂಬಿದ ಸಂದರ್ಭವನ್ನು ನೆಪ ಮಾಡಿಕೊಂಡು ಮುನ್ನಲೆಗೆ ತಂದಿದೆ. ಸಾಲದು ಎಂದು ಮುಸ್ಲಿಮರ ಕಾರಣಕ್ಕೆ ಕೈ ಬಿಡಲಾಗಿದ್ದ 4 ಚರಣಗಳನ್ನು ಬೇಕೆಂದೇ ಸೇರ್ಪಡೆಗೊಳಿಸಿದೆ. ಭಾರತವನ್ನು ಬ್ರಾಹ್ಮಣೀಯ ಹಿಂದೂ ರಾಷ್ಟ್ರ ಮಾಡುವ ಬೃಹತ್ ಹುನ್ನಾರದ ಭಾಗವಾಗಿ ವಂದೇ ಮಾತರಂನ 150ನೇ ವರ್ಷವನ್ನು ದುರುದ್ದೇಶದಿಂದ ಸಂಭ್ರಮಿಸುತ್ತಿದೆ. ಅದಕ್ಕೆ ತಕ್ಕಂತೆ ಪ್ರಧಾನಿ ನರೇಂದ್ರ ಮೋದಿಯವರು, ವಂದೇ ಮಾತರಂ ಗೀತೆಯ ಕೆಲ ಪ್ರಮುಖ ಸಾಲುಗಳನ್ನು 1937ರಲ್ಲಿ ಕಾಂಗ್ರೆಸ್ ಕೈಬಿಟ್ಟಿದೆ. ಇದು ದೇಶ ವಿಭಜನೆಯ ಬೀಜ ಬಿತ್ತಲು ಕಾರಣವಾಯಿತು ಎಂದು ಹಿಂದೂ-ಮುಸ್ಲಿಂ ದ್ವೇಷದ ಬೀಜ ಬಿತ್ತಿದ್ದರು.

ಪ್ರಧಾನಿಗಳ ಮಾತಿಗೆ ಉತ್ತರ ಕೊಟ್ಟಿದ್ದ ಆಪ್ ಸಂಸದ ಸಂಜಯ್ ಸಿಂಗ್, ವಂದೇ ಮಾತರಂ ಎಂದರೆ ಮಾತೃಭೂಮಿಗೆ ವಂದನೆ ಸಲ್ಲಿಸುವುದು ಎಂದರ್ಥ. ಆದರೆ, ನೀವು- ಬಿಜೆಪಿಯವರು ಮಾತೃಭೂಮಿಯನ್ನು ಮಾರಾಟ ಮಾಡುವ ಜನರಾಗಿದ್ದೀರಿ, ಮಾತೃಭೂಮಿಗೆ ವಂದನೆ ಸಲ್ಲಿಸುವವರಲ್ಲ ಎಂದು ನಿಜ ನುಡಿದಿದ್ದರು.

ಮುಂದುವರೆದು ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ, ಸುಜಲಾ, ಸುಫಲಾಮ್, ಮಲಯಜ ಶೀತಲಾಮ್, ಸಸ್ಯ ಶಾಮಲಾಮ್ ಅಂದರೆ, ನಮ್ಮ ಜಲ ಶುದ್ಧವಾಗಿರಬೇಕು. ನೆಲ ಹಸಿರಿನಿಂದ ಕಂಗೊಳಿಸಬೇಕು. ಪರ್ವತ ಶ್ರೇಣಿಗಳು ತಣ್ಣನೆಯ ಗಾಳಿ ಬೀಸಬೇಕು ಎಂಬುದು ಕವಿಗಳ ಆಶಯವಾಗಿತ್ತು. ಆದರೆ, ಬಿಜೆಪಿ ಆಡಳಿತದಲ್ಲಿ ಎಲ್ಲವೂ ಕಲುಷಿತಗೊಂಡಿದೆ. ಮಾರಾಟವಾಗುತ್ತಿದೆ. ಆದರೆ ಆಡಲಿಕ್ಕೆ, ಜನರನ್ನು ಮರುಳು ಮಾಡಲಿಕ್ಕೆ ಮಾತೃಭೂಮಿ ಬೇಕಾಗಿದೆ, ಬಳಕೆಯಾಗುತ್ತಿದೆ ಎಂದು ವ್ಯಂಗ್ಯವಾಡಿದ್ದರು.

ಅಸಲಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ಎಂದೂ ಭಾಗವಹಿಸದ, ಬದಲಿಗೆ ಸ್ವಾತಂತ್ರ್ಯ ಹೋರಾಟಕ್ಕೆ ದ್ರೋಹ ಬಗೆದು ಬ್ರಿಟಿಷರಿಗೆ ನೆರವಾದ ಪರಂಪರೆಯುಳ್ಳ ಸಂಘ ಪರಿವಾರ ಮತ್ತು ಅದರ ನೆರವಿನಿಂದ ರಚಿಸಲ್ಪಟ್ಟ ಮೋದಿ ಸರ್ಕಾರ, ಈಗ ವಂದೇ ಮಾತರಂ ಗೀತೆಯನ್ನು ಕಡ್ಡಾಯ ಮಾಡಿರುವುದರ ಹಿಂದೆ, ಹಿಡನ್ ಅಜೆಂಡಾ ಇದೆ. ವಿರೋಧ ಪಕ್ಷಗಳು ಎತ್ತುತ್ತಿರುವ ಪ್ರಶ್ನೆಗಳಿಗೆ ಉತ್ತರ ಕೊಡಲಾಗದೆ ನುಣುಚಿಕೊಳ್ಳುವ, ದೇಶದ ಜನರ ದಿಕ್ಕು ತಪ್ಪಿಸುವ ಹುನ್ನಾರವಿದೆ. ತನ್ನ ಎಲ್ಲಾ ವೈಫಲ್ಯಗಳಿಗೆ ದೇಶಪ್ರೇಮದ ವೇಷ ತೊಡಿಸುವ ಆಟವಿದೆ.

ಅದಕ್ಕಿಂತಲೂ ಮುಖ್ಯವಾಗಿ ಬರಲಿರುವ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮೇಲೆ ಕಣ್ಣಿಟ್ಟಿದೆ. ಆ ಕಾರಣದಿಂದಾಗಿಯೇ ಮುಸ್ಲಿಂ ದ್ವೇಷವನ್ನು ಮುನ್ನಲೆಗೆ ತಂದಿದೆ. ಬಂಗಾಲದವರೇ ಆದ ಬಂಕಿಮಚಂದ್ರ-ಠಾಗೂರ್ ಅವರ ಕುರಿತು ಪರಸ್ಪರ ಕಚ್ಚಾಡುವಂತೆ, ಇಬ್ಭಾಗವಾಗುವಂತೆ ಮಾಡಿದೆ. ಅದು ವೋಟು ಧ್ರುವೀಕರಣಕ್ಕೆ ಅನುಕೂಲವಾಗುತ್ತದೆಂದು ಭಾವಿಸಿದೆ. ಐದು ವರ್ಷಗಳ ಹಿಂದೆ, ಇದೇ ಪಶ್ಚಿಮ ಬಂಗಾಳದ ಚುನಾವಣೆಗೆ ಮೋದಿಯವರು ಮಾನವತಾವಾದಿ ರವೀಂದ್ರನಾಥ ಠಾಗೂರ್ ಅವರಂತೆ ಗಡ್ಡ ಬಿಟ್ಟು, ಶಾಲು ಹೊದ್ದು ಪೋಸು ಕೊಟ್ಟಿದ್ದರು. ಅದು ವರ್ಕೌಟ್ ಆಗಿರಲಿಲ್ಲ. ಆದಕಾರಣ ಈ ಚುನಾವಣೆಗೆ ಹಿಂದೂವಾದಿ ಬಂಕಿಮಚಂದ್ರದ ಮೊರೆ ಹೋಗಿದ್ದಾರೆ. ವಂದೇ ಮಾತರಂ ಎಂಬ ದೇಶಭಕ್ತಿಯ ಘೋಷಣೆಗೆ ಜೋತುಬಿದ್ದಿದ್ದಾರೆ. ಬಿಹಾರ ಚುನಾವಣೆಗೂ ಮುಂಚೆ ಹಿಂದುಳಿದ ನಾಯಕ ಕರ್ಪೂರಿ ಠಾಕೂರ್‌ಗೆ ಭಾರತರತ್ನ ನೀಡಿದ್ದನ್ನು, ಬಿಹಾರ ಗೆದ್ದಿದ್ದನ್ನು ನೆನಪು ಮಾಡಿಕೊಂಡರೆ, ಮೋದಿಯವರ ಈಗಿನ ಆಟ ಅರ್ಥವಾಗಬಹುದು.

ಹಾಗಾಗಿ ದೇಶದ ಜನತೆಯ ಮುಂದೆ ಜನಗಣಮನ ಅಥವಾ ವಂದೇ ಮಾತರಂ ಎಂಬ ಆಯ್ಕೆ ಎದುರಾದರೆ, ಭಾರತವು ಮುಸ್ಲಿಂ ದ್ವೇಷಿ ಹಿಂದೂ ರಾಷ್ಟ್ರವಾಗಬೇಕೋ ಅಥವಾ ಸರ್ವಜನಾಂಗದ ಶಾಂತಿಯ ತೋಟವಾಗಬೇಕೋ ಎಂಬ ರಾಜಕೀಯ ಆಯ್ಕೆಯಲ್ಲಿ ಬಹುತ್ವ ಭಾರತದ ಪರ ನಿಲ್ಲಬೇಕಾಗಿದೆ. ಭಾರತ ರಾಷ್ಟ್ರೀಯತೆ ಎಂದರೆ ಹಿಂದೂ ರಾಷ್ಟ್ರೀಯತೆ ಎಂಬ ಸಂಘ ಪರಿವಾರದ- ಬಿಜೆಪಿಯ ಸುಳ್ಳಿನ ನರೇಶನ್ ಗೆ ವಂದೇ ಮಾತರಂ ಬಳಸಿಕೊಳ್ಳುತ್ತಿರುವುದನ್ನು ಅರ್ಥ ಮಾಡಿಕೊಳ್ಳಬೇಕಿದೆ. ನೈಜ ದೇಶಭಕ್ತರು ಮೋದಿ ಸರ್ಕಾರದ ಈ ದೇಶದ್ರೋಹಿ, ಜನದ್ರೋಹಿ ಹುನ್ನಾರಗಳಿಗೆ ಬಲಿಯಾಗದೆ, ಎಚ್ಚೆತ್ತುಕೊಳ್ಳಬೇಕಿದೆ.

ಸಿರುಗುಪ್ಪ : ದತ್ತಿ ಉಪನ್ಯಾಸ ಕಾರ್ಯಕ್ರಮ ವೈಜ್ಞಾನಿಕ ಚಿಂತನೆಯಿಂದ ಪ್ರೇರಿತ ಸಿದ್ದಲಿಂಗಯ್ಯ ಸ್ವಾಮಿ

ಸಿರುಗುಪ್ಪ ,ಫೆ.12-

ಕುವೆಂಪು ಅವರ ವೈಚಾರಿಕ ನಿಲುವು ವೈಜ್ಞಾನಿಕ ಚಿಂತನೆಯಿಂದ ಪ್ರೇರಿತವಾಗಿದೆ ಎಂದು ಉಪನ್ಯಾಸಕರಾದ ಸಿದ್ದಲಿಂಗಯ್ಯ ಸ್ವಾಮಿ ಹೇಳಿದರು ಸಿರುಗುಪ್ಪ ನಗರದ ಎಸ್ ಇ ಎಸ್ ಡಿಎಡ್ ಕಾಲೇಜಿನಲ್ಲಿ ಬಳ್ಳಾರಿ ಜಿಲ್ಲಾ ಹಾಗೂ ಸಿರುಗುಪ್ಪ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ನಿಂದ ಆಯೋಜಿಸಿದ ಶಾಂತಾಬಾಯಿ ಹಾಗೂ ಷಣ್ಮುಖಪ್ಪ ಬಳಿಗಾರ್ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಪುಸ್ತಕ ಬಿಡುಗಡೆ ಗೊಳಿಸಿ ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್ ತಾಲೂಕ ಅಧ್ಯಕ್ಷ ಡಾ ಮಧುಸೂದನ ಕಾರಿಗನೂರು ಮಾತನಾಡಿದರು

ಕಾಲೇಜಿನ ಪ್ರಾಂಶುಪಾಲ ಮಹಮ್ಮದ್ ಫಯಾಜ್ ನಿವೃತ್ತ ಉಪನ್ಯಾಸಕ ಶಿವಕುಮಾರ್ ಎಸ್ ಬಳಿಗಾರ್ ಹಿರಿಯ ಸಾಹಿತಿ ಅಬ್ದುಲ್ ನಬಿ ಉಪನ್ಯಾಸಕರಾದ ಚಂದ್ರಕಾಂತ ಭೀಮ ಲಿಂಗಪ್ಪ ವೆಂಕಟೇಶ್ ವಿದ್ಯಾರ್ಥಿಗಳು ಇದ್ದರು.

ಪಿಎಂ ಕೇರ್ಸ್ ಬಚ್ಚಿಡುವುದೇಕೇ ಮೋದಿ ಸರ್ಕಾರ?

ಸಾರ್ವಜನಿಕ ನಿಧಿಗಳ ಕುರಿತ ಮಾಹಿತಿಗಳನ್ನು ಸರ್ಕಾರ ಮುಚ್ಚಿಡುತ್ತಿರುವುದಾದರೂ ಯಾಕಾಗಿ? ಇಲ್ಲಿ ಬೃಹತ್ ಭ್ರಷ್ಟಾಚಾರ ಅಥವಾ ಹಗರಣ ನಡೆದಿರಬಹುದೇ? ಇದಕ್ಕೆ ಸರ್ಕಾರವೇ ಉತ್ತರಿಸಬೇಕು. ಆದರೆ, ಸರ್ಕಾರ ಉತ್ತರಿಸಲು ಸಿದ್ಧವಿಲ್ಲ.

ಕೊರೊನಾ ವೈರಲ್ ಆಕ್ರಮಣದ ಕಾಲದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹುಟ್ಟುಹಾಕಿದ ಪ್ರಧಾನಮಂತ್ರಿ ಕೇರ್ಸ್ ಫಂಡ್ ಅರ್ಥಾತ್ ಪಿಎಂ ಕೇರ್ಸ್ ಕುರಿತು ಅಂದಿನಿಂದಲೂ ಭಾರೀ ಚರ್ಚೆಗಳು ನಡೆಯುತ್ತಿವೆ. ಕೊರೊನಾ ವಿರುದ್ಧದ ಹೋರಾಟಕ್ಕಾಗಿ ಪಿಎಂ ಕೇರ್ಸ್‌ಗೆ ಯಾರೆಲ್ಲ ದಾನಿಗಳು ದೇಣಿಗೆ ನೀಡಿದರು. ಎಷ್ಟು ಹಣ ಹರಿದು ಬಂದಿತು. ಅದರಲ್ಲಿ, ಬಳಕೆಯಾದದ್ದು ಎಷ್ಟು? ಇನ್ನೂ ಎಷ್ಟು ಪಿಎಂ ಕೇರ್ಸ್‌ನಲ್ಲಿದೆ ಎಂಬುದು ಈವರೆಗೂ ದೇಶವಾಸಿಗಳಿಗೆ ಗೊತ್ತಾಗಿಲ್ಲ. ಸರ್ಕಾರ ಪಿಎಂ ಕೇರ್ಸ್‌ನ ಮಾಹಿತಿಗಳನ್ನು ಬಚ್ಚಿಟ್ಟುಕೊಂಡಿದೆ. ಅದು ಸಾರ್ವಜನಿಕ ನಿಧಿಯಲ್ಲ, ಮಾಹಿತಿ ಕೊಡಲು ಬರುವುದಿಲ್ಲವೆಂದು ಮೋದಿ ಸರ್ಕಾರ ವಾದಿಸುತ್ತಿದೆ. ಇದೀಗ, ಮತ್ತೊಂದು ಹೆಜ್ಜೆ ಮುಂದೆ ಹೋಗಿರುವ ಸರ್ಕಾರ, ಪಿಎಂ ಕೇರ್ಸ್ ಕುರಿತು ಸಂಸತ್ತಿನಲ್ಲಿ ಪ್ರಶ್ನೆಗಳನ್ನು ಅನುಮತಿಸಬಾರದು ಎಂದು ಪ್ರಧಾನಮಂತ್ರಿಗಳ ಕಚೇರಿ ಲೋಕಸಭಾ ಸಚಿವಾಲಯಕ್ಕೆ ಪತ್ರವೊಂದನ್ನು ಬರೆದಿದೆ.

ಹೌದು, 2026ರ ಜನವರಿ 30ರಂದು ಲೋಕಸಭಾ ಸಚಿವಾಲಯಕ್ಕೆ ಪ್ರಧಾನಿ ಕಚೇರಿ ಬರೆದಿರುವ ಪತ್ರದ ಕುರಿತು ಈಗ ಚರ್ಚೆಗಳು ಮುನ್ನೆಲೆಗೆ ಬಂದಿವೆ. ಈ ಪತ್ರದ ಬೆನ್ನಲ್ಲೇ, ಪಿಎಂ ಕೇರ್ಸ್ ಫಂಡ್, ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿ () ಮತ್ತು ರಾಷ್ಟ್ರೀಯ ರಕ್ಷಣಾ ನಿಧಿ () ಈ ಮೂರು ನಿಧಿಗಳ ಕುರಿತು ಲೋಕಸಭೆಯಲ್ಲಿ ಪ್ರಶ್ನೆಗಳು, ಝೀರೋ ಅವರ್ ನೋಟಿಸ್‌ಗಳು ಅಥವಾ ಸ್ಪೆಷಲ್ ಮೆನ್ಷನ್‌ಗಳನ್ನು ಅನುಮತಿಸುವುದಿಲ್ಲ ಎಂದು ಲೋಕಸಭಾ ಸಚಿವಾಲಯದಿಂದ ಸಂಸದರಿಗೆ ಸೂಚನೆ ನೀಡಲಾಗಿದೆ ಎಂದು ಆರೋಪಿಸಲಾಗಿದೆ.

ಪ್ರಧಾನಿ ಕಚೇರಿಯು ತನ್ನ ಪತ್ರದಲ್ಲಿ ಲೋಕಸಭೆ ಕಲಾಪ ನಡವಳಿ ನಿಯಮಗಳ ನಿಬಂಧನೆ 41(2)(8) ಮತ್ತು 41(2)(17)ಯನ್ನು ಉಲ್ಲೇಖಿಸಿದೆ. ಈ ಸೆಕ್ಷನ್‌ಗಳು



ಹೇಳುವಂತೆ, ಪ್ರಶ್ನೆಗಳು ಭಾರತ ಸರ್ಕಾರದ ಪ್ರಾಥಮಿಕ ಜವಾಬ್ದಾರಿಯಲ್ಲದ ವಿಷಯಗಳಿಗೆ ಸಂಬಂಧಿಸಿರಬಾರದು. ಸರ್ಕಾರಕ್ಕೆ ನೇರವಾಗಿ ಜವಾಬ್ದಾರಿಯಲ್ಲದ ಸಂಸ್ಥೆಗಳು ಅಥವಾ ವ್ಯಕ್ತಿಗಳ ನಿಯಂತ್ರಣದಲ್ಲಿರುವ ವಿಷಯಗಳನ್ನು ಪ್ರಶ್ನಿಸಲು ಅನುಮತಿ ಇಲ್ಲ. ಅಂದರೆ, ಪಿಎಂ ಕೇರ್ಸ್, ಪಿಎಂ ಹಾಗೂ ನಿಧಿಗಳು ಸರ್ಕಾರದ ಪ್ರಾಥಮಿಕ ಜವಾಬ್ದಾರಿಯಲ್ಲದ ವಿಷಯಗಳು ಎಂದು ಸರ್ಕಾರ ಹೇಳುತ್ತಿದೆ.

ಪತ್ರದಲ್ಲಿ ಪ್ರಧಾನಿ ಕಚೇರಿ ವಾದಿಸಿರುವಂತೆ, ಈ ಮೂರು ನಿಧಿಗಳು ಸಂಪೂರ್ಣವಾಗಿ ಸ್ವಯಂಪ್ರೇರಿತ ಸಾರ್ವಜನಿಕ ಕೊಡುಗೆಗಳಿಂದ ರಚಿತವಾಗಿವೆ. ಇವುಗಳಿಗೆ ಭಾರತದ ಸಂಯೋಜಿತ ನಿಧಿಯಿಂದ ಯಾವುದೇ ಹಣ ಬರುವುದಿಲ್ಲ. ಹೀಗಾಗಿ, ಇವು ಸರ್ಕಾರಿ ನಿಧಿಗಳಲ್ಲ. ಸರ್ಕಾರದ ಪ್ರಾಥಮಿಕ ಜವಾಬ್ದಾರಿಯಲ್ಲದ್ದರಿಂದ ಸಂಸತ್ತಿನಲ್ಲಿ ಪ್ರಶ್ನೆಗಳು ಅನ್ವಯಿಸುವುದಿಲ್ಲ ಎಂದು ಹೇಳಿಕೊಂಡಿದೆ. ಮಾತ್ರವಲ್ಲದೆ, ಈ ನಿಧಿಗಳ ಕುರಿತಾದ ಪ್ರಶ್ನೆಗಳನ್ನು ಲೋಕಸಭೆ ಕಲಾಪ ನಡವಳಿ ನಿಯಮಗಳ ನಿಬಂಧನೆ 41(2)(8) ಮತ್ತು 41(2)(17) ನಿಯಮಗಳ ಅಡಿಯಲ್ಲಿ ನಿರಾಕರಿಸಬಹುದು ಎಂದು ಸಚಿವಾಲಯಕ್ಕೆ ಹೇಳಿದೆ.

ಈ ನಿರ್ಧಾರದ ಹಿನ್ನೆಲೆಯಲ್ಲಿ ಪಿಎಂ ಕೇರ್ಸ್ ಫಂಡ್‌ನ ಗೌಪ್ಯತೆಯ ಕುರಿತು ಮತ್ತಷ್ಟು ಪ್ರಶ್ನೆಗಳು ಮುನ್ನೆಲೆಗೆ ಬಂದಿವೆ. ಮುಖ್ಯವಾಗಿ, ಆರು ವರ್ಷಗಳ ಹಿಂದೆ, 2020ರ ಮಾರ್ಚ್‌ನಲ್ಲಿ ಪಿಎಂ ಕೇರ್ಸ್ ರಚಿಸಲಾಯಿತು. ಈ ನಿಧಿಗೆ ಪ್ರಧಾನಿ ಮೋದಿ ಅವರೇ ಅಧ್ಯಕ್ಷರೂ ಆಗಿದ್ದಾರೆ. ಸರ್ಕಾರದ ಹೇಳಿಕೆಯ ಪ್ರಕಾರ, ಇದು ಸಾರ್ವಜನಿಕ ಚಾರಿಟಬಲ್ ಟ್ರಸ್ಟ್ ಆಗಿದ್ದು, ಸರ್ಕಾರಿ ಸಂಸ್ಥೆಯಲ್ಲ. ಹೀಗಾಗಿ ಮಾಹಿತಿ ಹಕ್ಕು ಕಾಯ್ದೆ ಅಡಿಯಲ್ಲಿ ಬರುವುದಿಲ್ಲ ಎಂದು ವಾದಿಸುತ್ತಲೇ ಇದೆ.

ಸರ್ಕಾರದ ವಾದಕ್ಕೆ ಸುಪ್ರೀಂ ಕೋರ್ಟ್ ಮತ್ತು ಇತರ ನ್ಯಾಯಾಲಯಗಳೂ ಸೀಲ್ ಒತ್ತಿವೆ. ಈ ನಿಧಿಯನ್ನು ಸರ್ಕಾರಿ ಆಡಿಟ್ ಸಂಸ್ಥೆ ಸಿಎಜಿ ಬದಲಾಗಿ ಖಾಸಗಿ ಆಡಿಟರ್‌ಗಳು ಆಡಿಟ್ ಮಾಡುತ್ತಾರೆ. ಫಂಡ್‌ನ ವೆಬ್‌ಸೈಟ್‌ನಲ್ಲಿ ವಾರ್ಷಿಕ ವರದಿಗಳು, ಕೊಡುಗೆಗಳ ಸಾಮಾನ್ಯ ವಿವರಗಳು ಲಭ್ಯವಿವೆ. ಆದರೆ, ವೈಯಕ್ತಿಕ ಕೊಡುಗೆದಾರರ ಹೆಸರುಗಳು ಅಥವಾ ಕೆಲವು ನಿಖರ ವಿವರಗಳನ್ನು ಬಹಿರಂಗಪಡಿಸಲಾಗಿಲ್ಲ. ಕೊಡುಗೆದಾರರ ಹೆಸರುಗಳನ್ನೂ ಗೌಪ್ಯವಾಗಿಯೇ ಇರಿಸಲಾಗಿದೆ.

ಪ್ರಧಾನಮಂತ್ರಿ ಮತ್ತು ಸರ್ಕಾರಿ ಸಚಿವರು ಟ್ರಸ್ಟಿಗಳಾಗಿರುವುದರಿಂದ, ಸರ್ಕಾರಿ ಸೌಲಭ್ಯಗಳಾದ ಪ್ರಧಾನಿ ಕಚೇರಿ, ವೆಬ್‌ಸೈಟ್ ಅನ್ನು ಬಳಸುತ್ತಿರುವುದರಿಂದ ಇದು ಸರ್ಕಾರಿ ನಿಧಿಯಂತೆಯೇ ಆಗಿದೆ. ಸಾರ್ವಜನಿಕ ಕೊಡುಗೆಗಳು ಸಾವಿರಾರು ಕೋಟಿ ರೂಪಾಯಿಯಷ್ಟು ಬಂದಿರುವುದರಿಂದ ಈ ಕುರಿತು ಸಂಸತ್ತು ಮತ್ತು ಜನರು ಕೇಳುವ ಹಕ್ಕು ಹೊಂದಿದ್ದಾರೆ ಎಂದು ವಿಪಕ್ಷಗಳು ಹೇಳುತ್ತಿವೆ.

ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳು ಇದನ್ನು ಪಾರದರ್ಶಕತೆಯನ್ನು ತಪ್ಪಿಸುವ ಪ್ರಯತ್ನ ಎಂದು ಕರೆದಿದ್ದಾರೆ. ಸರ್ಕಾರ ಏನನ್ನು ಮರೆಮಾಚುತ್ತಿದೆ? ಎಂಬ ಪ್ರಶ್ನೆಗಳು ಉದ್ಭವಿಸಿವೆ. ಆರ್‌ಟಿಐ ಅರ್ಜಿಗಳನ್ನು ನಿರಾಕರಿಸಲಾಗಿದೆ. ಈಗ ಸಂಸತ್ತಿನಲ್ಲಿಯೂ ಪ್ರಶ್ನೆಗಳನ್ನು ನಿರ್ಬಂಧಿಸುವುದು ಸಂಸದೀಯ ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುತ್ತದೆ ಎಂದು ಟೀಕಿಸಲಾಗಿದೆ.

ಈ ಕಟ್ಟರ್ ಗೌಪ್ಯತೆಯು ನಿಯಮಾವಳಿಗಳ ಆಧಾರದ ಮೇಲೆ ಇದ್ದರೂ, ಇದು ಫಂಡ್‌ನ ಕಾರ್ಯವಿಧಾನ, ಹಣದ ಬಳಕೆ ಮತ್ತು ಜವಾಬ್ದಾರಿಯ ಕುರಿತು ಸಾರ್ವಜನಿಕ ಆತಂಕಗಳನ್ನು ಹೆಚ್ಚಿಸಿದೆ. ಸರ್ಕಾರ ಇದನ್ನು ಸಾರ್ವಜನಿಕ ಹಿತಕ್ಕಾಗಿ ಮತ್ತು ಕೊಡುಗೆದಾರರ ಗೌಪ್ಯತೆಗಾಗಿ ಎಂದು ಸಮರ್ಥಿಸಿಕೊಳ್ಳುತ್ತದೆ. ಆದರೆ, ಇದು ಅಧಿಕಾರದ ದುರುಪಯೋಗ ಅಥವಾ ಮರೆಮಾಚುವಿಕೆ ಎಂದು ವಿಪಕ್ಷಗಳು ಹಾಗೂ ಕಾರ್ಯಕರ್ತರು ಹೇಳುತ್ತಿದ್ದಾರೆ. ಆದರೂ, ಸಾರ್ವಜನಿಕ ನಿಧಿಗಳ ಕುರಿತ ಮಾಹಿತಿಗಳನ್ನು ಸರ್ಕಾರ ಮುಚ್ಚಿಡುತ್ತಿರುವುದಾದರೂ ಯಾಕಾಗಿ? ಇಲ್ಲಿ ಬೃಹತ್ ಭ್ರಷ್ಟಾಚಾರ ಅಥವಾ ಹಗರಣ ನಡೆದಿರಬಹುದೇ? ಇದಕ್ಕೆ ಸರ್ಕಾರವೇ ಉತ್ತರಿಸಬೇಕು. ಆದರೆ, ಸರ್ಕಾರ ಉತ್ತರಿಸಲು ಸಿದ್ಧವಿಲ್ಲ.

ಸರ್ವ ಜನಾಂಗದ ಶಾಂತಿಯ ತೋಟದಲ್ಲಿ ಸಹಬಾಳ್ವೆಯ ಕಥನ- ಮಾದರಿಯಾದ ಹುಕ್ಕೇರಿಯ ಮುಸ್ಲಿಂ ದಂಪತಿ

ಹಿಂದು - ಮುಸ್ಲಿಂ ಎಂಬ ವಿಭಜನೆಯನ್ನೇ ರಾಜಕೀಯ ಬಂಡವಾಳವಾಗಿಸಿಕೊಂಡು, ದ್ವೇಷದ ಬೀಜ ಬಿತ್ತುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿರುವ ಹೊತ್ತಿನಲ್ಲಿ, ಮಾನವೀಯತೆಯೇ ಧರ್ಮ ಎಂಬ ಸಂದೇಶವನ್ನು ಸಾರುವ ಘಟನೆಗಳು ಸಮಾಜಕ್ಕೆ ನಿರಾಳತೆಯ ಉಸಿರನ್ನು ನೀಡುತ್ತಿವೆ. ಇಂತಹದ್ದೇ ಒಂದು ಸಹಬಾಳ್ವೆಯ ಹೃದಯಸ್ಪರ್ಶಿ ಘಟನೆ ಕರ್ನಾಟಕದ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಬಸ್ತವಾಡ ಗ್ರಾಮದಲ್ಲಿ ಇತ್ತೀಚೆಗೆ ನಡೆದಿದೆ.

ದೇಶದಲ್ಲಿ ದ್ವೇಷವೇ ರಾಜಕೀಯ ಅಸ್ತ್ರವಾಗಿರುವ ಕಾಲವಿದು. ಟಿವಿ ಚರ್ಚೆಗಳಿಂದ ಹಿಡಿದು ಚಹಾ ಅಂಗಡಿಯ ಮಾತುಕತೆಗಳವರೆಗೂ ಹಿಂದು - ಮುಸ್ಲಿಂ ವಿಭಜನೆ ಬಗ್ಗೆ ವಿಷಕಾರುವ ಮಾತುಕತೆಗಳೇ. ಮುಸ್ಲಿಂ ಎಂಬ ಗುರುತನ್ನೇ ಅಪರಾಧವೆಂಬಂತೆ ಬಿಂಬಿಸಿ, ಒಂದು ಸಮುದಾಯವನ್ನು ಇಡೀ ದೇಶದ ಮುಂದೆ ಆರೋಪಿ ಸ್ಥಾನದಲ್ಲಿಡುವ ಪ್ರಯತ್ನಗಳು ನಡೆಯುತ್ತಿವೆ. ಮುಸ್ಲಿಂರು ಪಾಕಿಸ್ತಾನದವರು, ದೇಶದ್ರೋಹಿಗಳು ಎಂಬ ಹಣೆಪಟ್ಟಿ ಕಟ್ಟುವ ಪ್ರಯತ್ನಗಳು ಎಗ್ಗಿಲ್ಲದೇ ನಡೆಯುತ್ತಿವೆ. ಆದರೆ, ಇಂತಹ ದ್ವೇಷ ಹರಡುವ ಘಟನೆಗಳಿಗೆ ಇತ್ತೀಚೆಗೆ, ದೇಶದಲ್ಲಿ ನಡೆದ ಸಹಬಾಳ್ವೆಯ ಘಟನೆಗಳು ಸವಾಲು ಹಾಕಿವೆ. ದ್ವೇಷಕ್ಕಿಂತ ಮನುಷ್ಯತ್ವ ದೊಡ್ಡದು ಎಂಬುದನ್ನ ಸಾರಿವೆ.

ಇತ್ತೀಚೆಗೆ, ಉತ್ತರಾಖಂಡದ ಪೌರಿ ಜಿಲ್ಲೆಯ ಕೋಟ್ದ್ವಾರ ಪಟ್ಟಣದಲ್ಲಿ ನಡೆದ ಘಟನೆ ಇಡೀ ದೇಶದ ಗಮನ ಸೆಳೆದಿತ್ತು. ಬಜರಂಗದಳ ಕಾರ್ಯಕರ್ತರಿಂದ ಕಿರುಕುಳಕ್ಕೆ ಒಳಗಾಗಿದ್ದ 70 ವರ್ಷದ ಮುಸ್ಲಿಂ ವ್ಯಕ್ತಿಯ ಪರವಾಗಿ ನಿಂತ ದೀಪಕ್ ಕುಮಾರ್ ಅವರು ಮೊಹಮ್ಮದ್ ದೀಪಕ್ ಆದರು. ದ್ವೇಷದ ಮಾರುಕಟ್ಟೆಯಲ್ಲಿ ಪ್ರೀತಿಯ ಅಂಗಡಿ ತೆರೆದರು. ದ್ವೇಷಕ್ಕಿಂತ, ಧರ್ಮಕ್ಕಿಂತ ಮಾನವೀಯತೆ, ಮನುಷ್ಯತ್ವವೇ ದೊಡ್ಡದು ಎಂದು ಇಡೀ ಜಗತ್ತಿಗೆ ತೋರಿಸಿ ಕೊಟ್ಟು ಹೀರೋ ಆದರು.

ಹಿಂದು- ಮುಸ್ಲಿಂ ಎಂಬ ವಿಭಜನೆಯನ್ನೇ ರಾಜಕೀಯ ಬಂಡವಾಳವಾಗಿಸಿಕೊಂಡು, ದ್ವೇಷದ ಬೀಜ ಬಿತ್ತುವ ಕೆಲಸ ವ್ಯವಸ್ಥಿತವಾಗಿ ನಡೆಯುತ್ತಿರುವ ಹೊತ್ತಿನಲ್ಲಿ, ಮಾನವೀಯತೆಯೇ ಧರ್ಮ ಎಂಬ ಸಂದೇಶವನ್ನು ಸಾರುವ ಘಟನೆಗಳು ಸಮಾಜಕ್ಕೆ ನಿರಾಳತೆಯ ಉಸಿರನ್ನು ನೀಡುತ್ತಿವೆ. ಇಂತಹದ್ದೇ ಒಂದು ಸಹಬಾಳ್ವೆಯ ಹೃದಯಸ್ಪರ್ಶಿ ಘಟನೆ ಕರ್ನಾಟಕದ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಬಸ್ತವಾಡ ಗ್ರಾಮದಲ್ಲಿ ಇತ್ತೀಚೆಗೆ ನಡೆದಿದೆ.

ಹಿಂದು - ಮುಸ್ಲಿಂ ಎಂದು ಕಿತ್ತಾಟ ಹಚ್ಚುವವರ ನಡುವೆ, ಮನುಷ್ಯತ್ವವೇ ನಿಜವಾದ ಧರ್ಮ ಎಂದು ಮುಸ್ಲಿಂ ದಂಪತಿ ಸಾರಿದ್ದಾರೆ. ಧರ್ಮ ಎಂಬ ಬೇಗುದಿಗೆ ಬೀಳದೇ ಇರುವ ಇವರು ಚಿಕ್ಕ ವಯಸ್ಸಿನ ಹಿಂದು ಅನಾಥ ಮಕ್ಕಳನ್ನ ಕೈಬಿಡದೆ ತಮ್ಮ ಮಕ್ಕಳಂತೆ ಸಾಕಿ ಸಲುಹಿ ಹಿಂದೂ ಸಂಪ್ರದಾಯದಂತೆ ಮದುವೆ ಮಾಡಿದ್ದಾರೆ. ಇದು ಕೇವಲ ಒಂದು ಕುಟುಂಬದ ಕತೆಯಲ್ಲ, ಬದಲಾಗಿ ಈ ದ್ವೇಷ ರಾಜಕಾರಣಕ್ಕೆ, ಮತಾಂಧತೆಗೆ ಹಿಡಿದ ಕನ್ನಡಿಯಾಗಿದೆ.

ಹುಕ್ಕೇರಿ ತಾಲ್ಲೂಕಿನ ಬಸ್ತವಾಡ ಗ್ರಾಮದ ಮೆಹಬೂಬ್ ಹಸನ್ ನಾಯಿಕವಾಡಿ (ಮುಲ್ಲಾ) ಮತ್ತು ನೂರ್ಜಾನ್ ದಂಪತಿಗಳು ಚಿಕ್ಕ ವಯಸ್ಸಿನಲ್ಲೇ ತಂದೆ - ತಾಯಿಯನ್ನು ಕಳೆದುಕೊಂಡು ಅನಾಥರಾಗಿದ್ದ ಹಿಂದೂ-ಲಿಂಗಾಯತ ಸಮಾಜದ ಶಿವಾನಂದ ಕಾಡಯ್ಯ ಪೂಜಾರ ದಂಪತಿಯ ಇಬ್ಬರು ಮಕ್ಕಳಾದ ಸೋಮಶೇಖರ್ (ನಾಲ್ಕು ವರ್ಷ), ವಸಂತ (ಎರಡು ವರ್ಷ) ಅವರನ್ನು ಸಾಕಿ ಸಲುಹಿದ್ದಾರೆ.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಚಾಲಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಮೆಹಬೂಬ್ ಹಸನ್ ನಾಯಿಕವಾಡಿ ದಂಪತಿಗೂ ನಾಲ್ವರು ಪುತ್ರರು ಮತ್ತು ಒಬ್ಬ ಪುತ್ರಿ ಇದ್ದಾರೆ. ಒಟ್ಟು ಏಳು ಮಕ್ಕಳನ್ನು ಒಂದೇ ಮನೆಯಲ್ಲಿಟ್ಟು, ಊಟ, ಬಟ್ಟೆ, ಶಿಕ್ಷಣ ಎಲ್ಲವನ್ನೂ ಸಮಾನವಾಗಿ ಕೊಟ್ಟು ನೋಡಿಕೊಂಡಿದ್ದಾರೆ. ಅನಾಥರಾಗಿ ದಿಕ್ಕಿಲ್ಲದೇ ಕುಳಿತಿದ್ದ ಮಕ್ಕಳಿಗೆ ದಾರಿದೀಪವಾಗಿದ್ದಾರೆ. ತಮ್ಮ ಮಕ್ಕಳ ಜತೆಗೆ ಇನ್ನಿಬ್ಬರು ಮಕ್ಕಳನ್ನು ತಮ್ಮ ಮಡಿಲಿಗೆ ಹಾಕಿಕೊಂಡು ಪ್ರೀತಿ - ಕಾಳಜಿಯಿಂದ ಸಾಕಿದ್ದಾರೆ. ಕಷ್ಟದಲ್ಲಿಯೇ ಜೀವನ ನಡೆಯುತ್ತಿದ್ದರೂ ತಲೆಕೆಡಿಸಿಕೊಳ್ಳದೇ ತಮ್ಮೆಲ್ಲ ಮಕ್ಕಳನ್ನ ಓದಿಸಿ ಬೆಳೆಸಿದ್ದಾರೆ. ಇದರ ಪ್ರತಿಫಲವಾಗಿ ಸೋಮಶೇಖರ್ ಮತ್ತು ಪಿಯು ಪೂರ್ಣಗೊಳಿಸಿದ ವಸಂತ ಇಬ್ಬರೂ ಯಮಕನಮರಡಿ ಬಳಿಯ ವಿಶೇಷ ಆರ್ಥಿಕ ವಲಯದ ಏಕಸ್ ಕಂಪನಿಯಲ್ಲಿ ಉದ್ಯೋಗದಲ್ಲಿದ್ದಾರೆ. ಮೃತ ಕಾಡಯ್ಯ ಪೂಜಾರ ಕೂಡ ಖಾಸಗಿ ಬಸ್ ಚಾಲಕರಾಗಿದ್ದರು.

ಮಹಾರಾಷ್ಟ್ರದ ಗಡಹಿಂಗ್ಲಜ ತಾಲ್ಲೂಕಿನ ತನೂಡಿ ಗ್ರಾಮದ ಪೂನಂ ಹಿರಿಯ ಪುತ್ರ ಸೋಮಶೇಖರ್ (24) ಮದುವೆ ರವಿವಾರ ಕಾಡಸಿದ್ದೇಶ್ವರ ಸಭಾಭವನದಲ್ಲಿ ನಡೆಯಿತು. ಈ ಮದುವೆ ನಡೆದಿದ್ದು ಹಿಂದೂ ಸಂಪ್ರದಾಯದಂತೆ, ಮದುವೆಯ ವಧು - ವರರು ಹಿಂದೂಗಳು ಆದರೆ, ಈ ಮದುವೆಯ ಸಂಪೂರ್ಣ ಖರ್ಚು - ವೆಚ್ಚ, ಓಡಾಟ, ಕಾಳಜಿ ಮತ್ತು ಮದುವೆಯ ಸಂಪೂರ್ಣ ಜವಾಬ್ದಾರಿ ಮುಸ್ಲಿಂ ಕುಟುಂಬದ್ದಾಗಿದೆ.

ಮುಸ್ಲಿಂ ಮನೆತನದವರು ಹಿಂದೂ ಲಿಂಗಾಯತ ಸಂಪ್ರದಾಯದಂತೆ ಮದುವೆ ನೆರವೇರಿದಿದ್ದಾರೆ. ಈ ಮದುವೆಗೆ ನಾಯಿಕವಾಡಿ ಕುಟುಂಬದವರು, ಊರಿನ ಹಿರಿಯರು ಸಾಕ್ಷಿಯಾಗಿದ್ದಾರೆ.

ತಂದೆ-ತಾಯಿ ಇಲ್ಲದ ಆ ಮಕ್ಕಳ ಬದುಕಿಗೆ ಆಸರೆಯಾಗಿ ನಿಂತ ಈ ದಂಪತಿ, ಯಾವುದೇ ಧರ್ಮದ ಲೆಕ್ಕಾಚಾರವಿಲ್ಲದೆ, ಮಾನವೀಯತೆಯ ನೆಲೆಯಲ್ಲಿ ಅವರನ್ನು ಬೆಳೆಸಿದ್ದಾರೆ. ಶಿಕ್ಷಣ, ಆರೈಕೆ, ಸಂಸ್ಕಾರಎಲ್ಲವನ್ನೂ ನೀಡಿದ ಅವರು, ಮಕ್ಕಳ ಜೀವನದ ಮಹತ್ವದ ಘಟ್ಟವಾದ ಮದುವೆಯನ್ನೂ ಹಿಂದೂ ಸಂಪ್ರದಾಯದ ಪ್ರಕಾರವೇ ನೆರವೇರಿಸಿದ್ದಾರೆ.

ಇದೊಂದು ಸರಳ ಘಟನೆ ಅಲ್ಲ; ದೇಶದಲ್ಲಿ ಹರಡುತ್ತಿರುವ ದ್ವೇಷದ ರಾಜಕಾರಣಕ್ಕೆ ಇದು ಸವಾಲು. ಒಂದು ಸಮುದಾಯವನ್ನೇ ಅಪರಾಧಿ ಸ್ಥಾನದಲ್ಲಿಟ್ಟು ಬಿಂಬಿಸುವ ಕೋಮುವಾದಿ ರಾಜಕಾರಣಕ್ಕೆ ಈ ಘಟನೆ ತಿರುಗೇಟು ನೀಡುತ್ತದೆ.

ದ್ವೇಷ ಹಬ್ಬಿಸುವ ರಾಜಕಾರಣ ಎಷ್ಟೇ ಜೋರಾಗಿದ್ದರೂ, ಅದಕ್ಕಿಂತ ಜೋರಾಗಿರುವುದು ಈ ದೇಶದ ಮಣ್ಣಿನ ಗುಣವಾಗಿರುವ ಸಹಬಾಳ್ವೆ. ಧರ್ಮದ ಹೆಸರಿನಲ್ಲಿ ಜನರನ್ನು ಒಡೆಯಲು ಯತ್ನಿಸುವವರಿಗೆ, ''ಮನುಷ್ಯತ್ವವೇ ಧರ್ಮ'' ಎಂದು ಗಟ್ಟಿಯಾಗಿ ಹೇಳುವ ಘಟನೆ ಇದು.


ಅನಾಥ ಹಿಂದು ಮಕ್ಕಳಿಗೆ ತಂದೆ-ತಾಯಿಯಾಗಿ ನಿಂತು, ಅವರ ಬದುಕಿನ ಅತಿ ಪವಿತ್ರ ಕ್ಷಣವಾದ ಮದುವೆಯನ್ನು ಅವರದೇ ಸಂಪ್ರದಾಯದಲ್ಲಿ ನೆರವೇರಿಸಿದ ಈ ದಂಪತಿ, ಮುಸ್ಲಿಂ ಸಮುದಾಯದ ಮೇಲೆ ವ್ಯವಸ್ಥಿತವಾಗಿ ಹೇರಲಾಗುತ್ತಿರುವ ಅಪವಾದಗಳಿಗೆ ಜೀವಂತ ತಿರುಗೇಟು ನೀಡಿದ್ದಾರೆ. ಮುಸ್ಲಿಮರು ಈ ದೇಶದ ಹೊರಗಿನವರು ಅಲ್ಲ, ಶತ್ರುಗಳಲ್ಲ; ಈ ನೆಲದ ಹಕ್ಕುದಾರ ನಾಗರಿಕರು ಎಂಬ ಸತ್ಯವನ್ನು ಈ ಘಟನೆ ಮತ್ತೊಮ್ಮೆ ನೆನಪಿಸುತ್ತದೆ.

ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಮತ್ತು ಸ್ಪರ್ಶ ಕುಷ್ಟ ರೋಗ ಜಾಗೃತಿ ಅಭಿಯಾನ

ಸಿರವಾರ, ಫೆ.12-

ಪಟ್ಟಣದ ಇಂದಿರಾ ಗಾಂಧಿ ವಸತಿ ಶಾಲೆ ಕಲ್ಲೂರು (ಸಿರವಾರ)ಯಲ್ಲಿ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಮತ್ತು ಸ್ಪರ್ಶ ಕುಷ್ಟ ರೋಗ ಜಾಗೃತಿ ಅಭಿಯಾನ ಆಚರಿಸಲಾಗುತ್ತದೆ.

ಕಾರ್ಯಕ್ರಮ ವೈದ್ಯಾಧಿಕಾರಿ ಡಾ.ಸುನೀಲ್ ಸರೋದೆ ಉದ್ಘಾಟಿಸಿ ಮಾತನಾಡಿದ ಅವರು ಜಂತು ಹುಳು 1 ರಿಂದ 19 ವರ್ಷದೊಳಗಿನ ಮಕ್ಕಳಲ್ಲಿ ಕಂಡು ಬರುವ ಕರುಳಿನ ಪರಾವಲಂಬಿ ಜಂತು ಹುಳುಗಳನ್ನು ನಿವಾರಿಸಿ, ಅವರ ಆರೋಗ್ಯ, ಪೌಷ್ಟಿಕಾಂಶ ಮಟ್ಟ ಮತ್ತು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವುದು ಇದರ ಮುಖ್ಯ ಗುರಿಯಾಗಿದೆ. ಈ ದಿನದಂದು ಶಾಲಾ , ಕಾಲೇಜುಗಳು ಮತ್ತು ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳಿಗೆ ಉಚಿತವಾಗಿ ಅಲ್ಬೆಂಡಜೋಲ್ (ಂಟಭಜಟಿಜಚಿದಠಟಜ) ಮಾತ್ರೆಗಳನ್ನು ನೀಡಲಾಗುತ್ತದೆ. ಸಾಮಾನ್ಯವಾಗಿ ವರ್ಷಕ್ಕೆ ಎರಡು ಬಾರಿ (ಫೆಬ್ರವರಿ 10 ಮತ್ತು ಆಗಸ್ಟ್ 10) ಈ ಅಭಿಯಾನವನ್ನು



ಹಮ್ಮಿಕೊಳ್ಳಲಾಗುತ್ತದೆ. ಫೆಬ್ರವರಿ 10 ರಂದು ಮಾತ್ರೆ ಪಡೆಯಲು ಸಾಧ್ಯವಾಗದ ಮಕ್ಕಳಿಗೆ ನಂತರದ ಫೆಬ್ರವರಿ 16 'ಮ್ಯಾಪ್-ಅಪ್' (ಒಠಠಿ-ಣಠಿ) ದಿನದಂದು ಮಾತ್ರೆ ನೀಡಲಾಗುತ್ತದೆ. ಭಾರತ ಸರ್ಕಾರವು 2015 ರಲ್ಲಿ ಈ ಯೋಜನೆಯನ್ನು ಪ್ರಾರಂಭಿಸಿತು. ಎಂದರು. ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮಶಪ್ಪ ದೊಡ್ಮನಿ ಮಾತನಾಡಿ

ಜನವರಿ 30 (ಗಾಂಧಿ ಪುಣ್ಯತಿಥಿ) ದಿಂದ ಪ್ರಾರಂಭವಾಗಿ 13, 2026 ರವರೆಗೆ 15 ದಿನಗಳ ಕಾಲ ನಡೆಯುತ್ತದೆ, ಕುಷ್ಠರೋಗದ ಬಗ್ಗೆ ಜನರಲ್ಲಿರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಲು, ರೋಗದ ಮುಂಚಿನ ಪತ್ತೆ ಮತ್ತು ಉಚಿತ ಚಿಕಿತ್ಸೆಯ ಬಗ್ಗೆ ಅರಿವು ಮೂಡಿಸಲು ಆರೋಗ್ಯ ಇಲಾಖೆ ಮತ್ತು ನಿರಂತರ ಪ್ರಯತ್ನಗಳನ್ನು ನಡೆಸುತ್ತಿವೆ. ಕುಷ್ಠರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು, ರೋಗಿಗಳಿಗೆ ಸಾಮಾಜಿಕ ಕಳಂಕವನ್ನು ತಪ್ಪಿಸುವುದು ಮತ್ತು ತಾರತಮ್ಯವನ್ನು ಹೋಗಲಾಡಿಸುವುದು. ಅರಿವು ಮೂಡಿಸುವುದು ಕುಷ್ಠರೋಗವು ಚಿಕಿತ್ಸೆ ಲಭ್ಯವಿರುವ ಕಾಯಿಲೆಯಾಗಿದೆ ಮತ್ತು ಇದು ಸಾಂಕ್ರಾಮಿಕವಲ್ಲ (ಅಂತರಂಗದಲ್ಲಿ ಹೆಚ್ಚಾಗಿ ಹರಡುವುದಿಲ್ಲ) ಎಂಬ ಸಂದೇಶವನ್ನು ಸಮಾಜಕ್ಕೆ ತಲುಪಿಸಲಾಗುತ್ತಿದೆ ಮತ್ತು ಶಾಲಾ-ಕಾಲೇಜುಗಳಲ್ಲಿ, ಗ್ರಾಮ ಪಂಚಾಯತ್ ಮಟ್ಟದಲ್ಲಿ ಆರೋಗ್ಯ ಅಧಿಕಾರಿಗಳು ಜಾಗೃತಿ ಮೂಡಿಸುತ್ತಿದ್ದೆ, ಒಟ್ಟಾಗಿ, ಕುಷ್ಠರೋಗದ ಬಗ್ಗೆ ಅರಿವು ಮೂಡಿಸೋಣ, ತಪ್ಪು ಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗ 'ದಿಂದ ಬಳಲುತ್ತಿರುವವರು ಯಾರೂ ಹಿಂದೆ ಉಳಿಯದಂತೆ ನೋಡಿಕೊಳ್ಳೋಣ ಎಂಬ ಘೋಷಣೆಯಡಿ ಈ ಅಭಿಯಾನ ನಡೆಯುತ್ತಿದೆ. 2027ರ ವೇಳೆಗೆ ಕುಷ್ಠರೋಗ ಮುಕ್ತ ಭಾರತವನ್ನು ನಿರ್ಮಿಸುವುದು ಎಂದರು.

ನಂತರ ಮಕ್ಕಳಿಗೆ ಸ್ಪರ್ಶ ಕುಷ್ಟ ರೋಗ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನದಲ್ಲಿ ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಈ ಸಂದರ್ಭದಲ್ಲಿ ರಾಮಣ್ಣ ಮುಖ್ಯೋಪಾಧ್ಯಾಯರು, ಶ್ರೀ ದೇವಿ ಃಊಇಔ , ಯಲ್ಲಾಲಿಂಗ ಆರೋಗ್ಯ ನಿರೀಕ್ಷಣಾಧಿಕಾರಿ, ಅಕ್ಕಮಹಾದೇವಿ ಖಿಏಖಿಛಿ ಕೌನ್ಸಿಲರ್, ಸುಮಾ ಅಊಔ , ಆರೋಗ್ಯ ಸಿಬ್ಬಂದಿ ವರ್ಗ, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR